

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 | Issue : 312 | Thursday 02-05-2024 | E-mail : maruti.b.hosamani76@gmail.com | Page: 4 | Price : Rs. 1/-


## ನಾನು ಬಳ್ಳಾರಿಯಲ್ಲಿ ಶಾಸಕನಾಗಿದ್ದಾಗ ಕಾಂಗ್ರೆಸ್ ಸರ್ಕಾರದ ಯೋಜನೆಗಳು ಅಭಿವೃದ್ಧಿಗಳು ಶಿಲ್ಪಿಯಾಗಿ ಉಳಿದಿದೆ: ಎನ್ ವೈ ಗೋಪಾಲಕೃಷ್ಣ ಶಾಸಕರು



**ಮೊಳಕಾಲ್ಮುರು** : ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಚೇಳ್ಳಗುರ್ಕಿ,ರೂಪನಗುಡಿ, ಶಂಕರ್ ಬಂಡಿ, ಯಲ್ಲಿ ಇಂದು ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಸನ್ಮಾನ್ಯ ಶ್ರೀ ಎನ್ ವೈ ಗೋಪಾಲಕೃಷ್ಣರವರು ಲೋಕಸಭಾ ಚುನಾವಣಾ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದು ನಾಡಿನ ಜನರಿಗೆ ಗ್ಯಾರಂಟಿಗಳನ್ನು ನೀಡಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ 25 ಗ್ಯಾರಂಟಿಗಳು ಜಾರಿಯಾಗಲಿವೆ. ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ ರೂ, ಯುವಕರಿಗೆ ವರ್ಷಕ್ಕೆ ಉದ್ಯೋಗ ಸಮೇತ ವರ್ಷಕ್ಕೆ ಕನಿಷ್ಠ ಒಂದು ಲಕ್ಷ ರೂ. ಶಿಷ್ಯವೇತನ, ರೈತರ ಸಾಲ ಮನ್ನಾ ಸೇರಿದಂತೆ ಅನೇಕ ಸವಲತ್ತುಗಳು ಸಿಗಲಿವೆ ತಿಳಿಸಿದರು.

ಈ ಬಳ್ಳಾರಿ ಗ್ರಾಮದಲ್ಲಿ ಅಭಿವೃದ್ಧಿಯ ಕಂಡಿರಲಿಲ್ಲ ಎಲ್ಲಿ ನೋಡಿದ ರಸ್ತೆಗಳು ತಗ್ಗು ಕುಣಿ ಕಾಣ ತೊಡಗುತ್ತಿದ್ದವು ಸೇತುವೆಗಳು ಓಡಾಡುವಂತ ರಸ್ತೆಗಳು ಚಿಕ್ಕ ಡ್ಯಾಮ್ ಗಳು ನೀರು ಹರಿಯುವ ಚಾನೆಲ್ಗಳು ಚರಂಡಿಗಳು ಮೂಲಭೂತ ಸೌಕರ್ಯಗಳು ಕುಡಿಯುವ ನೀರಿನ ವ್ಯವಸ್ಥೆ ಸರ್ಕಾರಿ ಶಾಲೆಗಳು ಸರ್ಕಾರದ ಎಲ್ಲಾ ಅಭಿವೃದ್ಧಿ ಯೋಜನೆಗಳನ್ನು ನಾನು ಮಾಡಿಸಿದ್ದೆ ಎಂದು ಎನ್ ವೈ ಗೋಪಾಲಕೃಷ್ಣ ಶಾಸಕರು ಮಾತನಾಡಿದರು.

ಈ ಹಿಂದೆ ನಾನು ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕನಾಗಿದ್ದ ಸಂದರ್ಭದಲ್ಲಿ 38 ಸಾವಿರ ಮತಗಳಿಂದ ಲೀಡನಲ್ಲಿ ಮತದಾರರು ನನ್ನ ಗೆಲ್ಲಿಸಿದ್ದರು ಅವರ ಋಣ ತೀರಿಸಬೇಕೆಂದು ಜನಪರ ಕಾರ್ಯಗಳು,ನೀರಾವರಿ ಶಾಶ್ವತ ಯೋಜನೆಗಳು, ರಸ್ತೆಯ ಮೂಲಭೂತ ಸೌಕರ್ಯ ಹಾಗೂ ಅನೇಕ ಅಭಿವೃದ್ಧಿ ಕಾಮಗಾರಿಗಳು ಈಗಲೂ ಜೀವಂತನ ನಿದರ್ಶನವಾಗಿ ಕಾಣುತ್ತಿವೆ ಎಂದು ತಿಳಿಸಿದರು.

ಸಚಿವರಾದ ಬಿ ನಾಗೇಂದ್ರ ಅಪಾರ ಸಂಖ್ಯೆ ಕಾರ್ಯಕರ್ತರು ಅಭಿಮಾನಿಗಳು ಮೊದಲಾದವರು ಉಪಸ್ಥಿತರಿದ್ದರು ಎಂದು ವರದಿಯಾಗಿದೆ.

**ತಾಲೂಕ ವರದಿಗಾರರು ಹಾಗೂ ಎಸ್.ಕೆ. ನ್ಯೂಸ್ ಕನ್ನಡ ಚಾನಲ್: ತಿಪ್ಪೇಸ್ವಾಮಿ. ಹೊಂಬಾಳೆ. ಮೊಳಕಾಲ್ಮುರು**

## "ನಮ್ಮ ಮತ ನಮ್ಮ ಸರ್ಕಾರ" ಜಾಗೃತಿ ಕಿರುಚಿತ್ರ ಬಿಡುಗಡೆ

**ಹುಬ್ಬಳ್ಳಿ :** ಎನ್.ಕೆ.ಎಂ.ಪಿ.ಎಸ್.ಸ್ಟುಡಿಯೋ ನಿರ್ಮಾಣದ "ನಮ್ಮ ಮತ ನಮ್ಮ ಸರಕಾರ" ಮೊಟ್ಟ ಮೊದಲ ಸಲ ಫೇಸ್ ರಿಪ್ಲೇಸ್ಮೆಂಟ್ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್(ಎ ಆಯ್) ಸಾಫ್ಟವೇರ್ ಟೆಕ್ನಾಲಜೀಸ್ ಬಳಸಿ ತಯಾರಿಸಲಾದ ಕರ್ನಾಟಕದ ಮೊದಲ ಪ್ಯಾನ್ ಇಂಡಿಯಾ ಕಿರುಚಿತ್ರ ಏಳು ಭಾಷೆಗಳಲ್ಲಿ ಇಂದು ಬಿಡುಗಡೆ ಮಾಡಲಾಯಿತು.

ಪೋಸ್ಟರ್ ಬಿಡುಗಡೆಯ ಜೊತೆಗೆ ಕನ್ನಡ, ಇಂಗ್ಲೀಷ್, ಹಿಂದಿ, ಮರಾಠಿ, ತೆಲಗು, ತಮಿಳು, ಮಲಯಾಳಂ ಹೀಗೆ ಏಳು ಭಾಷೆಗಳಲ್ಲಿ ಕಿರು ಚಿತ್ರವನ್ನು ಎನ್ಕೆಎಂಪಿಎಸ್ ಯೂಟ್ಯೂಬ್ ಚಾನೆಲ್ನಲ್ಲಿ ಬಿಡುಗಡೆ ಮಾಡಿದ ಹಿರಿಯ ರಂಗ ಮತ್ತು ಚಿತ್ರರಂಗ ಕಲಾವಿದ ಟಿ.ಜೆ.ಭಾಂಡಗೆ ಮಾತನಾಡಿ ಮತದಾನ ಮಾಡುವದು ಪ್ರತಿಯೊಬ್ಬ ಭಾರತೀಯರ ಹಕ್ಕು ಮತ್ತು ಕರ್ತವ್ಯ. ಈ ಹಕ್ಕು ಚಲಾಯಿಸಲು



ಪ್ರತಿಯೊಬ್ಬ ಭಾರತೀಯರಿಗೆ ಹದಿನೆಂಟು ವರ್ಷ ತುಂಬಿರ ಬೇಕು. ದೇಶದ ಉಜ್ವಲ ಭವಿಷ್ಯಕ್ಕಾಗಿ ಮತದಾನ ಅಗತ್ಯವಿದ್ದು ವಿವಿಧ ಪಕ್ಷಗಳು,ವ್ಯಕ್ತಿಗಳು ನೀಡುವ ಟೊಳ್ಳು ಭರವಸೆಗಳು ಆಮಿಷಗಳಿಗೆ ಒಳಗಾಗದೆ ಪ್ರಾಮಾಣಿಕವಾಗಿ ತಪ್ಪದೇ ನಮ್ಮ ನಮ್ಮ ಮತವನ್ನು ಚಲಾಯಿಸಬೇಕು . ಇಂಥ ಮತದಾನ ಜಾಗೃತಿ ಕುರಿತು ಈ ಕಿರುಚಿತ್ರ ತಯಾರಿಸಲಾಗಿದ್ದು ಮತದಾರ ಪ್ರಭುಗಳು ಕಿರುಚಿತ್ರ ವೀಕ್ಷಿಸಿ ಜಾಗೃತಗೊಂಡು ತಮ್ಮ ಅಮೂಲ್ಯ ಮತ ಚಲಾಯಿಸಿದರೆ ಚಿತ್ರ ತಂಡದ ಶ್ರಮ ಸಾರ್ಥಕ ಎಂದರು. ಈ ಸಂದರ್ಭದಲ್ಲಿ ಪ್ರೊಡಕ್ಷನ್ ಮ್ಯಾನೇಜರ್ ವಿಕ್ರಂ ಕುಮತ, ಸಹಾಯಕ ನಿರ್ದೇಶಕಿ ಭಾವನಾ ಶಿಂಧೆ, ಹಿರಿಯ ರಂಗಕಲಾವಿದೆ ರೇಖಾ ಹೊನವಾಡ ಮತ್ತು, ನಿರ್ದೇಶಕ ಎಸ್.ಎಸ್.ಕುಲಕರ್ಣಿ(ಬಾಬಾ) ಉಪಸ್ಥಿತರಿದ್ದರು.

ತಾರಾಂಗಣದಲ್ಲಿ ರೂಪಶ್ರೀ ವಿ ಪಾಟೀಲ, ಮಯೂರಿ ಎಸ್ ಛತ್ರೆ, ಅಭಿಷೇಕ್ ಎ ಕುಲಕರ್ಣಿ, ಸಂದೀಪ್ ಪದಕಿ, ಗೀತಾ ತಬೀಬ್, ತಾಂತ್ರಿಕ ವರ್ಗದಲ್ಲಿ ಪಿಆರ್ಓ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಸಹಾಯಕ ನಿರ್ದೇಶನ ಭಾವನಾ ಶಿಂಧೆ, ಚಿತ್ರಕಥೆ–ಸಂಭಾಷಣೆ, ವಿಎಫ್ ಎಕ್ಸ್–3ಡಿ ಅನಿಮೇಷನ್, ಸಂಕಲನ ನಿರ್ದೇಶನ ಜೊತೆಗೆ ನಿರ್ಮಾಣ ಎಸ್.ಎಸ್.ಕುಲಕರ್ಣಿ(ಬಾಬಾ)ಅವರೆ ನಿರ್ಮಾಪಕರಾಗಿದ್ದಾರೆ. ನಿರ್ಮಾಣ ವ್ಯವಸ್ಥೆಯನ್ನು ವಿಕ್ರಂ ಕುಮತ ಹೊತ್ತಿದ್ದಾರೆ.

**ವರದಿ: ಡಾ.ಪ್ರಭು ಗಂಜಿಹಾಳ ಮೊ:9448775346**

## ಚುನಾವಣಾ ನಿಮಿತ್ತ ಪಥ ಸಂಚಲನ ಜರುಗಿತು

**ಕೊಟ್ಟೂರು :** ವಿಜಯನಗರ ಜಿಲ್ಲೆಯ ಕೊಟ್ಟೂರು ತಾಲೂಕಿನ ದಿನಾಂಕ 30 ಏಪ್ರಿಲ್ 2024 ರ ಮಂಗಳವಾರ ದಂದು ನಾಗರಕಟ್ಟೆ ಹನುಮನಹಳ್ಳಿ ತೂಲಹಳ್ಳಿ ಚಿಹ್ನೆನಹಳ್ಳಿ ಕಾಳಾಪುರ ಮತ್ತು ಉಜ್ಜಿನಿ ಗ್ರಾಮಗಳಲ್ಲಿ ದಿನಾಂಕ 7 ಮೇ 2024 ರಂದು ನಡೆಯಲಿರುವ ಚುನಾವಣಾ ನಿಮಿತ್ತ ಪಥ ಸಂಚಲವನ್ನು ಕೈಗೊಳ್ಳಲಾಗಿರುತ್ತದೆ. ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೆ ನಿರ್ಭಿತವಾಗಿ ಮತ ಚಲಾಯಿಸಬೇಕು ರಾಷ್ಟ್ರದ ಅಭಿವೃದ್ಧಿಗೆ ಕಾರಣವಾಗುವ ಒಂದು ಮತ ತುಂಬಾ ಪ್ರಾಮುಖ್ಯವಾಗಿದೆ ಹೀಗಾಗಿ ಪ್ರತಿಯೊಬ್ಬರೂ ಮತದಾನ ಮಾಡುವುದು ತಮ್ಮ ಹಕ್ಕು ಎಂದು ಕೊಟ್ಟೂರು ವೃತ್ತ ನಿರೀಕ್ಷಕರಾದ ವೆಂಕಟಸ್ವಾಮಿ ರವರು ನೇತೃತ್ವ ವಹಿಸಿರುತ್ತಾರೆ ನೂರ್ ಆಹಮದ್ ಹೆಡ್ ಕಾನ್ಸ್ಟೇಬಲ್ ಮತ್ತು ಎಚ್ ಬಿ ಹಳ್ಳಿ ಪೊಲೀಸ್ ಠಾಣೆಯ ಅಸಿಸ್ಟೆಂಟ್ ಸಬ್ ಇನ್ಸ್ಪೆಕ್ಟರ್ ಅನ್ವರ್ ಕೇರಳದ ಸ್ಪೆಷಲ್ ಆರ್ಮ್ಸ್ ಪೊಲೀಸ್ ಮತ್ತು ಪೊಲೀಸ್ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ. ನ್ಯೂಸ್ ಕನ್ನಡ ಚಾನಲ್:ಪ್ರದೀಪ್.ಕುಮಾರ್.ಸಿ ಕೊಟ್ಟೂರು.**



## "ನಮ್ಮ ನಡೆ ಮತಗಟ್ಟೆ ಕಡೆ" ಮೇ 07 ರಂದು ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತ ಚಲಾಯಿಸಿ

**ಕವಿತಾಳ :** ಪಟ್ಟಣ ಪಂಚಾಯತ ಮತ್ತು ಆರೋಗ್ಯ ಇಲಾಖೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ. ಶಿಕ್ಷಣ ಇಲಾಖೆ ಇವರು ಸಂಯುಕ್ತ ಆಶ್ರಯದಲ್ಲಿ ಇಂದು ಸರಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮತದಾನ ಜಾಗೃತಿ ಮೂಡಿಸುವ ಧ್ವಜಾರೋಹಣ ಮಾಡುವ ಮೂಲಕ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಂದ ಜಾಥಾ ಕಾರ್ಯಕ್ರಮ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತದಾನ ಜಾಗೃತಿ ಘೋಷಣೆಗಳನ್ನು ಕೂಗುತ್ತಾ ಸಾಗಿತು



ಸರಕಾರಿ ಬಾಲಕರ.ಶಾಲಾ ಅವರಣದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ. ಮತದಾರರ ಪ್ರತಿಜ್ಞಾ ವಿಧಿಯನ್ನು ಭೋಧಿಸಿದರು

ಪ್ರಜಾಪ್ರಭುತ್ವ ಪ್ರಭುತ್ವದಲ್ಲಿ ದೃಢ ವಿಶ್ವಾಸವುಳ ಭಾರತದ ಪೌರರಾದ ನಾವು ನಿರ್ಭಯವಾಗಿ ಯಾವುದೇ ಆಶೆ ಆಮಿಷಕ್ಕೆ ಬಲಿಯಾಗದೆ ತಪ್ಪದೇ.

ಮತ.ಚಲಾಯಿಸಿ. ಎಂದರು

ನಂತರ ಪಟ್ಟಣ ಪಂಚಾಯಿತ ಆರೋಗ್ಯ ನಿರೀಕ್ಷರಾದ ರಾಘವೇಂದ್ರ ಅವರು ಮಾತನಾಡುತ್ತಾ ನಿಮ್ಮ ಮತವನ್ನು ಚಲಾಯಿಸುವುದು ಈ ಸಮಯದಲ್ಲಿ ಜನರು ಮತ ಚಲಾಯಿಸುವಂತೆ ಮಾಡುವುದು ಪ್ರತಿಯೊಬ್ಬ ಮತದಾರರು ಮತದಾನದ ಹಕ್ಕು ನಿಂದ ಹೊರಗುಳಿಯದಂತೆ ತಮ್ಮ ಮತಗಳನ್ನು ಚಲಾಯಿಸಬೇಕು ಎಂದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳು. ಡಾಕ್ಟರ ಶ್ರೀಧರ ಇಲ್ಲೂರು ಆರೋಗ್ಯ ನಿರೀಕ್ಷಣಾ ಅಧಿಕಾರಿಗಳು ಪ್ರದೀಪ ಕುಮಾರ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸಿ ಆರ್ ಪಿ ಸೌಮ್ಯ ಶ್ರೀ, ಹಾಗೂ ಸಿಬ್ಬಂದಿ ವರ್ಗದವರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯರು ಶಿಕ್ಷಕ ವೃಂದದವರು ,ಆರೋಗ್ಯ ಇಲಾಖೆ ಸಮುದಾಯ ಆರೋಗ್ಯ ಅಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಂಗನವಾಡಿ ಕಾರ್ಯಕರ್ತೆರು ಆರೋಗ್ಯ ಇಲಾಖೆ ಆಶಾ ಕಾರ್ಯಕರ್ತರು ಸಾರ್ವಜನಿಕರು ಉಪಸ್ಥಿತರಿದ್ದರು.

## ಮೋದಿ ಮತ್ತೊಮ್ಮೆ ಪ್ರಧಾನಿ ಶತ ಸಿದ್ಧ, ಎಸ್ಟಿ ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತ

**ಕೂಡ್ಲಿಗಿ :** 10 ವರ್ಷದ ಆಳ್ವಿಕೆಯಲ್ಲಿ ದೇಶದ ಅಭಿವೃದ್ಧಿ ಹಾಗೂ ಸಾಮಾನ್ಯ ಜನರ ಬದುಕನ್ನು ಹಸನಾಗಿಸುವ ಕೆಲಸವನ್ನು ಬಿಜೆಪಿ ನೇತೃತ್ವದ ಮೋದಿ ಸರಕಾರ ಮಾಡಿದ್ದು, ಈಗ ಮತ್ತೊಮ್ಮೆ ಕೇಂದ್ರದಲ್ಲಿ ಮೋದಿಯವರ ನೇತೃತ್ವದಲ್ಲಿ ಸರಕಾರ ರಚನೆಯಾಗುವುದು ಖಚಿತ. ಭಾರತವನ್ನು ವಿಶ್ವ ಗುರುವಾಗಿಸುವ ನಿಟ್ಟಿನಲ್ಲಿ ಮತ್ತೊಮ್ಮೆ ಮೋದಿ ಅಧಿಕಾರಕ್ಕೆ ಬರಬೇಕಾಗಿದೆ ಎಂದು ಬಿಜೆಪಿ ಎಸ್.ಟಿ ಮೋರ್ಚಾದ ರಾಜ್ಯ ಅಧ್ಯಕ್ಷರಾದ ಬಂಗಾರು ಹನುಮಂತು ಹೇಳಿದರು. ಅವರು ಪಟ್ಟಣದ ಗಾಣಿಗರ ಸಮುದಾಯ ಭವನದಲ್ಲಿ ಮಂಗಳವಾರ ನಡೆದ ಬಳ್ಳಾರಿ ವಿಜಯನಗರ ಲೋಕಸಭಾ ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಅವರ ಗೆಲುವಿಗಾಗಿ ಹೊಸಹಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಯ ಮುಖಂಡರುಗಳು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು. ರಾಷ್ಟ್ರದ ಭವಿಷ್ಯ ನಿರ್ಧಾರ ಮಾಡುವ ಚುನಾವಣೆ ಇದಾಗಿದೆ. ಕಾರ್ಯಕರ್ತರು ಸಂಕಲ್ಪ ತೊಡುವ ಮೂಲಕ ತಾವೇ ಅಭ್ಯರ್ಥಿಗಳಂತೆ ತಮ್ಮ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸಬೇಕಿದೆ. ಹಾಗಾಗಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಶ್ರೀರಾಮುಲು ಅವರನ್ನು ಅತ್ಯಧಿಕ ಮತಗಳ ಅಂತರದಲ್ಲಿ ಗೆಲ್ಲಿಸಲು ಶ್ರಮಿಸುವುದಾಗಿ ತಿಳಿಸಿದರು.



ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಬಣವಿಕಲ್ಲು ನಾಗರಾಜ್, ಉಪಾಧ್ಯಕ್ಷ ಓಬಳೇಶ್, ಜಿಲ್ಲಾ ಉಪಾಧ್ಯಕ್ಷ ಭದ್ರಾವತಿ ಚಂದ್ರಶೇಖರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಜೀವ್ ರೆಡ್ಡಿ, ರೈತ ಮೋರ್ಚಾದ ಜಿಲ್ಲಾಧ್ಯಕ್ಷ ರೇವಣ್ಣ, ಸೂರ್ಯ ಪಾಪಣ್ಣ ಚೆನ್ನಪ್ಪ ಚಂದ್ರಮೌಳಿ, ಕಲ್ಲೇಶ್ ಗೌಡ್ರು, ಮೂಗಣ್ಣ, ಬಾಲಪ್ಪಣ್ಣ, ಭೀಮಣ್ಣ, ದುರುಗೇಶ್, ಕೆ. ಸುಭಾಷ್ ಚಂದ್ರ.ಹಡಗಲಿ ಬಸವರಾಜ, ಮಂಡಲದ ಮಹಿಳಾ ಮೋರ್ಚಾ ಅಧ್ಯಕ್ಷ ಶಾರದ, ಪವಿತ್ರ, ನೇತ್ರಾವತಿ ಮಂಜುನಾಥ್ , ರೇಖಾಮಲ್ಲಿಕಾರ್ಜುನ, ಗೀತಾ, ಮಂಡಲ ಕಾರ್ಯದರ್ಶಿ ಮಂಜುನಾಥ, ಸಿದ್ದೇಶ್, ಯುವ ಮೋರ್ಚಾ ಅಧ್ಯಕ್ಷ ಅಜಯ್ ಸೇರಿದಂತೆ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

**ಹೋಬಳಿ ವರದಿಗಾರರು ಹಾಗೂ ಎಸ್.ಕೆ. ನ್ಯೂಸ್ ಕನ್ನಡ ಚಾನಲ್:ಕೆ.ಎಸ್.ವೀರೇಶ್. ಕಾನಾ ಹೊಸಹಳ್ಳಿ**

## ರೈತರಿಗೆ ಉಚಿತವಾಗಿ ಮೇವು ವಿತರಣೆ

**ಕೃಷ್ಣರಾಜಪೇಟೆ:**ಬಡ ರೈತನ ಜಾನುವಾರುಗಳಿಗೆ 1ಲಕ್ಷ ರೂ ಬೆಲೆಯ ಉಚಿತವಾಗಿ ಮೇವು ಕೊಡುಗೆಯಾಗಿ ನೀಡಿದ ಚಿತ್ರನಟ ವಿನೋದ್ರಾಜ್.

ತಾಲ್ಲೂಕಿನ ಸಿಂಧಘಟ್ಟ ಗ್ರಾಮದ ಪ್ರಗತಿಪರ ರೈತ ಪುಟ್ಟರಾಜು ಅವರು ತಮ್ಮ ರಾಸುಗಳಿಗೆ ಮೇವಿಲ್ಲದೇ ತೊಂದರೆಯಲ್ಲಿ ಇರುವುದನ್ನು ತಿಳಿದು ಉಚಿತವಾಗಿ ಮೇವು ವಿತರಣೆ ಮಾಡಿ ಕನ್ನಡ ಚಲನಚಿತ್ರ ನಟ ವಿನೋದ್ರಾಜ್ ಇತರರಿಗೆ ಮಾದರಿಯಾಗಿದ್ದಾರೆ.


ಸಕಾಲಕ್ಕೆ ಮಳೆಯಾಗದೆ ಜಾನುವಾರುಗಳಿಗೆ ಮೇವಿಲ್ಲದೆ ಬೇಸಿಗೆಯ ಬರಗಾಲದಲ್ಲಿ ತೀವ್ರವಾದ ಸಂಕಷ್ಟದಲ್ಲಿರುವ ರೈತ ಸಿಂದಘಟ್ಟ ಗ್ರಾಮದ ಪ್ರಗತಿಪರ ರೈತ ಪುಟ್ಟರಾಜು ಅವರಿಗೆ ಸುಮಾರು 1ಲಕ್ಷ ರೂ ಬೆಲೆ ಬಾಳುವ ಒಂದು ಲಾರಿ ಲೋಡ್ ಹುಲ್ಲನ್ನು(ಜಾನುವಾರು ಮೇವು) ತಾವು ಬೇರೆ ರೈತರಿಂದ ಖರೀದಿ ಮಾಡಿ ಬಡ ರೈತನಿಗೆ ಕೊಡುಗೆಯಾಗಿ ನೀಡಿದ ವಿನೋದ್ರಾಜ್ ಹೃದಯ ಶ್ರೀಮಂತಿಕೆ ಮೆರೆದರಲ್ಲದೆ ಪುಟ್ಟರಾಜು ಅವರ ಕುಟುಂಬದ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿ ಕುಟುಂಬದ ಸದಸ್ಯರ ಅಭಿಲಾಷೆಯ ಮೇರೆಗೆ ನಗುತೈತ್ತೆ ದೈವ ಅಲ್ಲಿ ಕುಳಿತೈತೆ ಜೀವ ಇಲ್ಲಿ ವಿಧಿಯಾಟ ಕಂಡರ್ಯಾರು ಮಾನವ ಹಾಡನ್ನು ಹಾಡಿ ತಮ್ಮ ತಾಯಿ ಕನ್ನಡ ಚಲನಚಿತ್ರ ರಂಗದ ಹಿರಿಯ ನಟಿಯಾದ ಲೀಲಾವತಿ ಅವರನ್ನು ನೆನೆದು ಭಾವುಕರಾಗಿ ಕಣ್ಣೀರು ಹಾಕಿದರು.



ದೈವಸ್ವರೂಪವಾದ ಮಾತು ಬಾರದ ಜಾನುವಾರುಗಳು ಮತ್ತು ಪ್ರಾಣಿಗಳಿಗೆ ಸಹಾಯ ಮಾಡಬೇಕು ಎಂಬುದು ನನಗೆ ನನ್ನ ತಾಯಿ ಲೀಲಾವತಿ ಅವರು ಕಲಿಸಿಕೊಟ್ಟ ಪಾಠವಾಗಿದೆ. ಜಾನುವಾರುಗಳ ಸೇವೆಗೆಂದೇ ಸುಸಜ್ಜಿತವಾದ ಒಂದು ಪಶು ಆಸ್ಪತ್ರೆಯನ್ನು ನನ್ನ ತಾಯಿ ನಿರ್ಮಿಸಿಕೊಟ್ಟಿದ್ದಾರೆ. ಪಶು, ಪಕ್ಷಿಗಳು ಹಾಗೂ ಪ್ರಾಣಿಗಳನ್ನು ಪ್ರೀತಿಸು ಎಂದು ನಾನು ನನ್ನ ತಾಯಿಯಿಂದ ಕಲಿತಿದ್ದೇನೆ. ಆದ್ದರಿಂದ ನನ್ನ ತಾಯಿಯ ಅಭಿಲಾಷೆಯಂತೆ ಸ್ನೇಹಿತರ ಮೂಲಕ ವಿಚಾರ ತಿಳಿದು ಸಂಕಷ್ಟದಲ್ಲಿರುವ ಬಡ ರೈತನು ತನ್ನ ಜಾನುವಾರುಗಳ ಸಂರಕ್ಷಣೆ ಮಾಡಿಕೊಳ್ಳಲು ಬೇಕಾದ ಮೇವು(ಹುಲ್ಲು) ಕೊಡಿಸುವ ಮೂಲಕ ನನ್ನ ಕೈಲಾದ ಸಹಾಯ ಮಾಡಿದ್ದೇನೆ ಎಂದು ವಿನೋದ್ರಾಜ್ ಹೇಳಿದರು. ಈ ಸಂದರ್ಭದಲ್ಲಿ ಸಮಾಜ ಸೇವಕ ಪಾಂಡವಪುರ ದೀಪು (ಲೋಹಿತ್), ರೈತಸಂಘದ ಮುಖಂಡ ಅತ್ತಿಗಾನಹಳ್ಳಿ ಜಗದೀಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ನಿರ್ದೇಶಕ ಎನ್.ಕೃಷ್ಣೇಗೌಡ, ಕಾಂಗ್ರೆಸ್ ಎಸ್ಸಿ,ಎಸ್ಟಿ ಘಟಕದ ಅಧ್ಯಕ್ಷ ಕೆ.ಬಿ.ರಾಮು, ಸೈಯ್ಯದ್ಖಲೀಲ್ ಸೇರಿದಂತೆ ಸಿಂಧಘಟ್ಟ ಗ್ರಾಮದ ಮುಖಂಡರು ಉಪಸ್ಥಿತರಿದ್ದರು,

**ವರದಿ: ಸಾಯಿಕುಮಾರ್. ಎನ್. ಕೆ,**

## ಬೀರು ಬಿಸಲಿಗೆ ತತ್ತರಿಸುತ್ತಿರುವ ಜಾನುವಾರುಗಳಿಗೆ ನೆರಳಿನ ಶೇಡ್ ವ್ಯವಸ್ಥೆಗೆ ರೈತರ ಮನವಿ



**ಕೂಡ್ಲಿಗಿ :** ಬರಗಾಲ ಪೀಡಿತ ಪ್ರದೇಶಗಳಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರು, ಮೇವಿನ ಸೌಲಭ್ಯ ದೊರಕಿಸುವಂತೆ ಈಗಾಗಲೇ ರಾಜ್ಯ ಸರ್ಕಾರ ಆದೇಶಿಸಿದೆ. ಅದರಂತೆ ಕೂಡ್ಲಿಗಿ ತಾಲೂಕಿನ ಗಂಡ ಬೊಮ್ಮನಹಳ್ಳಿ ಗೊ ಶಾಲೆಗಳಲ್ಲಿ ಗೋವುಗಳಿಗೆ ಮೇವು ನೀರು ಕೊಡುತ್ತಾರೆ ಆದರೆ ಕೆಲವು ಹಸುಗಳಿಗೆ ನೆರಳಿನ ವ್ಯವಸ್ಥೆ ಮಾತ್ರ ಇಲ್ಲವಾಗಿದೆ. ಆದ–ರೆ ಈ ಬಾರಿಯ ಬಿಸಿಲು ಹೆಚ್ಚಾಗಿದೆ ಸರಿ ಸುಮಾರು 38 ರಿಂದ 44 ಡಿಗ್ರಿ ಸೆಲ್ಸಿಯಸ್ ಗೆ ತಲುಪುತ್ತಿದೆ. ಪ್ರತಿ ದಿನ ಇಲ್ಲಿಗೆ 2000 ಕ್ಕೂ ಹೆಚ್ಚು ಜಾನುವಾರುಗಳು ಆಗಮಿಸುತ್ತವೆ. ಇಲ್ಲಿ ಕಡಿಮೆ ಶೇಡ್ಗಳನ್ನು ನಿರ್ಮಿಸಲಾಗಿದ್ದು ಒಂದರಲ್ಲಿ ಗರಿಷ್ಠ 80 ದನ ಆಶ್ರಯ ಪಡೆಯಬಹುದು. ಉಳಿದ ಜಾನುವಾರುಗಳು ಸುಡು ಬಿಸಿಲಲ್ಲಿರುವಂತಾಗಿದೆ. ಜಾನುವಾರು ಮಾಲೀಕರು ಶೇಡ್ ಕೊರತೆ ಕಂಡು ತೆಂಗಿನ ಗರಿಯಿಂದ, ಮುಳ್ಳಿನ ಗಿಡಗಳಿಗೆ ಹುಲ್ಲು ಹೊದಿಸಿ ನೆರಳಿನ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಗೋಶಾಲೆಗಳಲ್ಲಿ ಶೇಡ್ಗಳನ್ನು ನಿರ್ಮಿಸಿದ್ದಾರೆ. ಇನ್ ಕೆಲವು ಜಾನುವಾರುಗಳಿಗೆ ನೆರಳು ಕಲ್ಪಿಸುವ ಕಾರ್ಯ ಇಂದಿಗೂ ಸಮರ್ಪಕವಾಗಿ ಮಾಡಿಲ್ಲ. ಇಲ್ಲಿ ನೀರಿನ, ಮೇವಿನ ವ್ಯವಸ್ಥೆ ಸರಿಯಾಗಿ ಇದೆ, ತುಂಬಾ ಬಿಸಿಲು ಇರುವುದರಿಂದ ರೈತರೇ ಇಲ್ಲಿ ತೆಂಗಿನ ಗರಿ ಇಂದ ದನಗಳಿಗೆ ನೆರಳಿನ ವ್ಯವಸ್ಥೆ ಮಾಡಿ ಕೊಂಡಿರುತ್ತಾರೆ. ಇನ್ನೂ ಕೆಲವು ರೈತರು ಮರದ ನೆರಳಿಗೆ ದನಗಳನ್ನು ಕಟ್ಟಿ ಕೊಂಡಿರುತ್ತಾರೆ ತಾಲೂಕಾ ಅಧಿಕಾರಿಗಳು ದನಗಳಿಗೆ ನೆರಳು ವ್ಯವಸ್ಥೆ ಮಾಡಿಸ ಬೇಕೆಂದು ರೈತರು ಮನವಿ ಮಾಡಿದ್ದಾರೆ.

ಪಕ್ಕದ ಜಿಲ್ಲೆಯಿಂದ ಹಸುಗಳು ಬರುತ್ತವೆ, ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲೂಕಿನ ತಳವಾರಳ್ಳಿ ಗ್ರಾಮದಿಂದ 200 ಜಾನುವಾರಗಳು ಗಂಡ ಬೊಮ್ಮನಹಳ್ಳಿ ಗೋ ಶಾಲೆಗೆ ಬಂದಿರುತ್ತವೆ. ಹಲವು ವರ್ಷಗಳಿಂದ ಗಂಡ ಬೊಮ್ಮನಹಳ್ಳಿ ಗೋ ಶಾಲೆಗೆ ಬಂದಿರುತ್ತವೆ. ತಳವಾರಳ್ಳಿ ಗ್ರಾಮದ ನಿವಾಸಿಯಾದ ರೈತ ಕರಿಬಸಪ್ಪ, ನಾಗೇಶ ಮಾತನಾಡಿ. ಗಂಡ ಬೊಮ್ಮನಹಳ್ಳಿ ಗೋ ಶಾಲೆಗೆ ಮೊದಲು ನಿಂದಲೂ ಕೂಡ ನಾವು ಬರಗಾಲದಲ್ಲಿ ಗಂಡ ಬೊಮ್ಮನಹಳ್ಳಿ ಗೋ ಶಾಲೆಗೆ ಬಂದಿರುತ್ತೇವೆ. ಇಲ್ಲಿ ನೀರಿನ ವ್ಯವಸ್ಥೆ ಇದೆ. ನಮ್ಮ ಮೊಳಕಾಲ್ಮೂರು ತಾಲೂಕಿನಲ್ಲಿ ನಾವು ಗೋ ಶಾಲೆಗೆ ಹೋಗ ಬೇಕೆಂದರೆ ದೂರ ಹೋಗ ಬೇಕಾಗುತ್ತದೆ ಅಲ್ಲಿ ಸರಿಯಾದ ನೀರಿನ ವ್ಯವಸ್ಥೆ ಇರುವುದಿಲ್ಲ ಹಾಗಾಗಿ ನಾವು ಗಂಡ ಬೊಮ್ಮನಹಳ್ಳಿ ಗೋ ಶಾಲೆಗೆ ಬಂದಿರುತ್ತೇವೆ ಎಂದು ತಿಳಿಸಿದರು.

**ಜಿಲ್ಲಾ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ರಾಘವೇಂದ್ರ. ಬಿ. ಸಾಲುಮನೆ. ಕೂಡ್ಲಿಗಿ**

# ಬದುಕು ಬದಲಾಗಲು ನಿರ್ಧಾರ ನಡೆ ಮುಖ್ಯ: ಶ್ರೀ ರಂಭಾಪುರಿ ಜಗದ್ಗುರುಗಳು



**ರಂಭಾಪುರಿ ಪೀಠ (ಬಾಳೆಹೊ ನ್ನೂರು) :** ಮನುಷ್ಯನಲ್ಲಿ ಆತ್ಮ ಬಲ ಬೆಳೆಯಲು ಆಧ್ಯಾತ್ಮದ ಹಸಿವು ಮುಖ್ಯ. ಸನ್ಮಾರ್ಗದಲ್ಲಿ ನಡೆಯುವ ಛಲ ಇರಬೇಕು. ಬದುಕು ಬಲಗೊಳ್ಳಲು ನಮ್ಮ ನಿರ್ಧಾರ ನಡೆ ಗಟ್ಟಿಯಾಗಿರಬೇಕೆಂದು ಶ್ರೀ ರಂಭಾಪುರಿ ಡಾ.ವೀರಸೋ ಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶ್ರೀ ಪೀಠದಲ್ಲಿ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕಾಲು ಜಾರುವುದರಿಂದ ಆಗುವ ಅನಾಹುತಕ್ಕಿಂತ ನಾಲಿಗೆ ಜಾರುವುದರಿಂದ ಆಗುವ ಅಪಾಯವೇ ಹೆಚ್ಚು. ಆಡುವ ಮಾತಿನ ಬಗ್ಗೆ ಸದಾ ಎಚ್ಚರಿಕೆಯಿಂದ ಇರಬೇಕು. ಮನುಷ್ಯನಾಗಿ ಬಾಳುವುದು ಸುಲಭ. ಆದರೆ ಮನವೀಯತೆಯಿಂದ ನಡೆಯುವುದು ತುಂಬಾ ಕಷ್ಟ. ಉತ್ತಮ ಚಿಂತನೆಗಳು ನಮಗಷ್ಟೇ ಅಲ್ಲ ಪರರ ಬದುಕಿಗೂ ಬೆಳಕಾಗಬಲ್ಲವು. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಪರಿಶುದ್ಧವಾಗಿರಬೇಕು. ಸಂಪತ್ತು ಬಂದಾಗ ಸ್ನೇಹ ಮರೆಯಬಾರದು. ವಿದ್ಯೆ ಕಲಿತ ನಂತರ ಗುರು ಋಣ ಮರಿಬಾರದು. ಸಮಾಜದಲ್ಲಿ ಗೌರವ ಘನತೆ ದೊರಕಿದ ಸಂದರ್ಭದಲ್ಲಿ ನಡೆದು ಬಂದ ದಾರಿ ಮರೆಯಬಾರದು. ಒಗ್ಗಟ್ಟಿನಲ್ಲಿ ಬಹಳಷ್ಟು ಬಲವಿದೆ. ಆದರೆ ಆ ಒಗ್ಗಟ್ಟಿನ ರಹಸ್ಯವು ಸಂಘಟನೆಯಲ್ಲಿದೆ. ಹೆಜ್ಜೆ ತಪ್ಪಿದರೆ ಸರಿಪಡಿಸಿಕೊಳ್ಳಬಹುದು. ಆದರೆ ನಾಲಿಗೆ ತಪ್ಪಿದರೆ ತಪ್ಪಿಸಿಕೊಳ್ಳುವುದು ತುಂಬಾ ಕಷ್ಟ. ಮೌಲ್ಯಾಧಾರಿತ ಬದುಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆಗಳು ಸಕಲರಿಗೂ ಒಳಿತನ್ನು ಉಂಟು ಮಾಡುತ್ತವೆ ಎಂದರು.

ಬೇರುಗಂಡಿ ಬೃಹನ್ಮಠದ ರೇಣುಕ ಮಹಾಂತ ಶ್ರೀಗಳು, ಲಿಂಗದಹಳ್ಳಿ ಹಿರೇಮಠದ ವೀರಭದ್ರ ಶ್ರೀಗಳು

ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶ್ರೀಗಳು, ಹಿರೇಸಿಂದೋಗಿ ಹಿರೇಮಠದ ಶ್ರೀಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. 5 ಜನ ಜಂಗಮ ವಟುಗಳಿಗೆ ಅಯ್ಯಾಚಾರ ಶಿವದೀಕ್ಷೆ ಜರುಗಿ–ತು. ಬೆಂಗಳೂರಿನ ಬಾಳೆಲೆ ಬಸವರಾಜ ಮತ್ತು ತಂಡದವರು ಶ್ರೀ ರಂಭಾಪುರಿ ಜಗದ್ಗುರುಗಳವರ ಪಾದಪೂಜಾ ನೆರವೇರಿಸಿ ಗೌರವ ಸಮರ್ಪಿಸಿದರು. ಸಹಸ್ರಾರು ಭಕ್ತರು ಪಾಲ್ಗೊಂಡಿದ್ದನ್ನು ಸ್ಮರಿಸಬಹುದು.

# ಹನುಮಂತನಲ್ಲಿ ಸೇವಾ ಭಾವವಿತ್ತು: ಕೈಲಾಸಪೇಠಶ್ರೀ





**ತಾಳಿಕೋಟೆ :** ಸೇವಾ ಭಾವ ಭಕ್ತಿ ಭಾವ ಯಾವ ಕಾಲಕ್ಕೂ ತನ್ನ ಗುಣವನ್ನು ಬಿಟ್ಟುಕೊಡಲಿಲ್ಲಾ ಹನುಮಂತನು ಸೇವಾ ಭಾವವನ್ನು ಬಿಟ್ಟುಕೊಡದೇ ಶ್ರೀರಾಮ ಚಂದ್ರನ ಸೇವೆಯನ್ನು ಮಾಡುತ್ತಾ ಸಾಗಿದ್ದರಿಂದ ಅವನಲ್ಲಿದ್ದ ಭಕ್ತಿ ಎಂಬುದು ಎಲ್ಲದರಲ್ಲಿಯೂ ಜಯ ಸಾದಿಸುತ್ತಿತ್ತೆಂದು ಕೈಲಾಸ ಪೇಠೆಯ ಶ್ರೀ ಬಸವಪ್ರಭು ದೇವರು ನುಡಿದರು.

ಮಂಗಳವಾರರಂದು ಸ್ಥಳೀಯ ಆಶ್ರಯ ನಗರ ಬಡಾವಣೆಯಲ್ಲಿಯ ಶ್ರೀ ಮಾರುತೇಶ್ವರ 15 ವರ್ಷದ ಜಯಂತ್ಯೋತ್ಸವ ಹಾಗೂ ರಥೋತ್ಸವ ಕಾರ್ಯಕ್ರಮ ಕುರಿತು ಏರ್ಪಡಿಸಲಾದ ಧರ್ಮಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಶ್ರೀಗಳು ಹನುಮಂತನಿಗೆ ಆಂಜನೆಯ ಪವನಪುತ್ರನೆಂಬ ಅನೇಕ ಹೆಸರುಗಳಿಂದ ಕರೆಯಲಾಗುತ್ತದೆ ಆತನು ಶ್ರೀರಾಮಚಂದ್ರನ ಸೇವೆ ಮಾಡಿದ್ದಲ್ಲದೇ ತಪಸ್ಸು ನಿಷ್ಠೆಯಿಂದ ಸೇವೆ ಮಾಡುತ್ತಾ ಸಾಗಿದ್ದ ಅವನ ಕೀರ್ತಿ ಅಜರಾಮರವಾಗಿ ಉಳಿದಿದೆ ಎಂದರು. ಸೀತಾ ದೇವಿಯನ್ನು ಕರೆಯಲು ಲಂಕಾಕ್ಕೆ ಹೋಗಲು ಸಮುದ್ರಕ್ಕೆ ಸೇತುವೆ ನಿರ್ಮಾಣಕ್ಕಾಗಿ ಹನುಮಂತ ಇಡೀ ವಾನರ ಸೇನೆಯನ್ನು ತೆಗೆದುಕೊಂಡು ಸೇತುವೆ ನಿರ್ಮಾಣಕ್ಕಾಗಿ ಮುಂದಾದಾಗ ಆತ ಪ್ರತಿಯೊಂದು ಕಲ್ಲಿನ ಮೇಲೆ ಶ್ರೀರಾಮ ಎಂದು ಬರೆದು ಆ ಕಲ್ಲನ್ನು ಒಗೆದಾಗ ಅದು ತೇಲುತ್ತಾ ಸಾಗಿತ್ತು ಇದನ್ನು ನೋಡಿದ ಶ್ರೀರಾಮ ಚಂದ್ರನು ತಾನು ಕೂಡಾ ಶ್ರೀರಾಮ ಎಂದು ಬರೆದು ಕಲ್ಲನ್ನು ಒಗೆದು ನೋಡಿದ ಅದು ತೇಲದೇ ಮುಳುಗಿ ಹೋಯಿತು ಯಾಕೆಂದರೆ ನಾನು ಅನ್ನುವದನ್ನು ಬಿಟ್ಟು ಬಿಡಲಾರದ್ದೇ ಕಾರಣವಾಗಿತ್ತೆಂದರು. ನಾವು ಅನ್ನುವದನ್ನು ಬಿಟ್ಟು ಎಲ್ಲವೂ ನಿಂದೆ ಎಂದು ಆ ದೇವರ ಮೋರೆ ಹೋದರೆ ಎಲ್ಲವು ಒಳ್ಳೆಯದಾದೀತೆಂದು ಹೇಳಿದ ಶ್ರೀಗಳು ಇದು ಆಶ್ರಯ ನಗರ ಎನ್ನುವದಕ್ಕಿಂತ ಇಲ್ಲಿಯ ಕಾರ್ಯ ಚಟುವಟಿಕೆಗಳನ್ನು ನೋಡಿದರೆ ಆಜಂನಾದ್ರಿಯ ನಗರವೆಂದು ಕರೆಯುತ್ತೇನೆಂದು ಆಶ್ರಯ ನಗರ ಬಡಾವಣೆಯ ಜನರ ಭಕ್ತಿಭಾವ ಕುರಿತು ಗುಣಗಾನ ಮಾಡಿದರು.

ಇನ್ನೋರ್ವ ಸಾನಿದ್ಯ ವಹಿಸಿದ ಶ್ರೀ ಶಿವಭವಾನಿ ಮಂದಿರದ ಅರ್ಚಕರಾದ ವೇ.ಸಂತೋಷಬಟ್ ಜೋಶಿ ಅವರು ಮಾತನಾಡಿ ಹನುಮ ಜಯಂತಿಯ ದಿನದಂದು ಆಶ್ರಯ ಬಡಾವಣೆಯಲ್ಲಿ ಈ ಹಿಂದಿನಿಂದಲೂ ಎಲ್ಲ ನಮೂನೆಯ ಕಾರ್ಯಕ್ರಮಗಳು ನಡೆಯುತ್ತಾ ಸಾಗಿವೆ ಕಾರಣ ಇಲ್ಲಿಯ ಜನತೆಯ ಪರೋಪಕಾರದ ಗುಣಗಳೇ ಈ ಕಾರ್ಯ ಮಾಡುತ್ತಾ ಸಾಗಿವೆ ಎಂದರು. ನ್ಯಾಯ ಭಕ್ತಿ ಎಂಬುದನ್ನು ಅಳವಡಿಸಿಕೊಳ್ಳಬೇಕು ದಾನ ಧರ್ಮ ಪರೋಪಕಾರ ಎನ್ನುವಂತಹ ಗುಣಗಳನ್ನು ಅಳವಡಿಸಿಕೊಳ್ಳಬೇಕು ಸುಃಖಬರಲಿ ಕಷ್ಟ ಬರಲಿ ಹನುಮಂತನ ನಾಮ ಸ್ಮರಣೆ ಎಂಬುದನ್ನು ಬಿಡಬಾರದು ಸನಾತನ ಧರ್ಮ, ಆದ್ಯಾತ್ಮ ಧರ್ಮ, ಈ ದೇಶದ ಎರಡೂ ಮಹಾ ಶಕ್ತಿಗಳಾಗಿವೆ ಎಂದು ರಾಮಾಯಣ ಕಾಲದಲ್ಲಿ ಹನುಮಂತನು ಮಾಡಿದ ಕಾರ್ಯಗಳ ಕುರಿತು ವಿವರಿಸಿದರಲ್ಲದೇ ನಾನು ಎನ್ನುವದನ್ನು ಬಿಟ್ಟು ಸೇವೆಗೆ ಮುಂದಾದರೆ ಬೇಕಾದುದ್ದನ್ನು ಪಡೆಯಬಹುದಾಗಿದೆ ಎಂದರು.

ಇನ್ನೋರ್ವ ಹಿರಿಯ ಪತ್ರಕರ್ತರಾದ ಜಿ.ಟಿ.ಘೋರ್ಪಡೆ ಅವರು ಮಾತನಾಡಿ ಕರ್ನಾಟಕ ಕಿಸ್ಕಿಂದೆಯ ಆಂಜನಾದ್ರಿಯ ಬೆಟ್ಟದಲ್ಲಿ ಶ್ರೀ ಹನುಮಂತನು ಜನ್ಮ ತಾಳಿದ್ದು ಆತನ ತಂದೆ ವಾನರ ರಾಜಕೇಸರಿ ಮತ್ತು ತಾಯಿ ಆಂಜನಾದೇವಿಯವರ ಉದರದಲ್ಲಿ ಜನಿಸಿದ ಈ ಆಂಜನೆಯನ ಈ ಬೆಟ್ಟದಲ್ಲಿಯ ಅಭಿವೃದ್ದಿಗಾಗಿ ಈ ಹಿಂದೆ 100 ಕೋಟಿ ಅನುದಾನ ಸರ್ಕಾರದಿಂದ ಬಿಡುಗಡೆಯಾಗಿದೆ ಈ ದೇವಸ್ಥಾನದ ಅಭಿವೃದ್ದಿಗೂ ಪಣತೊಟ್ಟು ನಿಲ್ಲಲಾಗಿದೆ ಎಂದು ಹೇಳಿದರೆ ತಪ್ಪಾಗಲಾರದೆಂದರು. ಕಿಸ್ಕಿಂದೆ ಆಂಜನಾದ್ರಿ ಬೆಟ್ಟದ ಮೇಲೆ ಹತ್ತಲು ಸುಮಾರು 575 ಮೆಟ್ಟಲುಗಳಿದ್ದು ಅಸಂಖ್ಯಾತ ಜನರು ಈ ದೇವಸ್ಥಾನಕ್ಕೆ ಬರು ಹೋಗುವ ಕಾರ್ಯ ನಡೆಯುತ್ತಾ ಸಾಗಿದೆ ಎಂದು ಹೇಳಿದ ಘೋರ್ಪಡೆ ಅವರು ತಾಳಿಕೋಟೆ ಆಶ್ರಯ ಬಡಾವಣೆಯ ಭಕ್ತರು ಕಳೆದ 15 ವರ್ಷಗಳ ಹಿಂದೆ ಮೂರ್ತಿ ಪ್ರತಿಷ್ಠಾಪನೆ ಕುರಿತು ಕೈಕೊಂಡ ಕಾರ್ಯ ಚಟುವಟಿಕೆಗಳ ಕುರಿತು ಮಂದಿರ ನಿರ್ಮಾಣವಾಗಿ ಉದ್ಘಾಟನೆಯಾಗಿದ್ದರ ಕುರಿತು ಪತ್ರಿಕೆಗಳಲ್ಲಿ ಬರೆದು ಭಹಿರಂಗ ಪಡಿಸಿದ್ದರ ಕುರಿತು ವಿವರಿಸಿದ ಅವರು ಇಲ್ಲಿಯ ಭಕ್ತರು ಸುಮಾರು 15 ಲಕ್ಷ ರೂ. ಖರ್ಚು ಮಾಡಿ ಕಳೆದ ವರ್ಷ ನೂತನ ರಥವನ್ನು ನಿರ್ಮಿಸಿ ರಥೋತ್ಸವವನ್ನು ಜರುಗಿಸುತ್ತಾ ಸಾಗಿರುವದು ಈ ಭಾಗದಲ್ಲಿ ಭಕ್ತಿಭಾವವೆಂಬುದು ಕಡಿಮೆ ಇಲ್ಲವೆಂದು ಬಡಾವಣೆ ನಾಗರಿಕರ ಕಾರ್ಯ ಬಣ್ಣಿಸಿದರು.

ಸಾನಿದ್ಯ ವಹಿಸಿದ ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ವೇ.ಮುರುಘೇಶ ವಿರಕ್ತಮಠ ಅವರು ಬಡಾವಣೆ ನಾಗರಿಕರ ಸೇವಾ ಕಾರ್ಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಇನ್ನೂರ್ವ ವೇ.ಎಸ್.ಎಂ.ಬೇನಾಳಮಠ ಅವರು ಆಶ್ರಯ ಬಡಾವಣೆಯ ನಾಗರಿಕರ ಸೇವಾ ಕಾರ್ಯಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ನಂತರ ಶ್ರೀ ಮಾರುತೇಶ್ವರರ ರಥೋತ್ಸವವು ವಿಜೃಂಬಣೆಯಿಂದ ಜರುಗಿತು.

ವೇದಿಕೆಯ ಮೇಲೆ ಲಕ್ಷ್ಮೀಕಾತ ಬಡಿಗೇರ, ವೇ.ಗುರುಶಾಂತಯ್ಯ ಮಹಾ ಸ್ವಾಮಿಗಳು, ಪತ್ರಕರ್ತ ಬಸವರಾಜ ಕಟ್ಟಿಮನಿ, ಶಿಕ್ಷಕರಾದ ಪ್ರಕಾಶ ಕಟ್ಟಿಮನಿ, ದೇವರಾಜ ಬಾಗೇವಾಡಿ, ಎಸ್.ಎಸ್.ಗಡೇದ, ಮೊದಲಾದವರು ಇದ್ದರು.

ಕಾರ್ಯಕ್ರಮದ ನಂತರ ಶ್ರೀ ಮಾರುತೇಶ್ವರ ತೋಟ್ಟಿಲು ಕಾರ್ಯಕ್ರಮವು ಸುಮಂಗಲೆಯರಿಂದ ಜರುಗಿತು.

# ಸಂಸದ ರಮೇಶ ಜಿಗಜಿಣಗಿ ಪ್ರಚಾರ



**ವಿಜಯಪುರ :** ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಂದ ದೇಶ ಸುರಕ್ಷಿತವಾಗಿದೆ ಹಾಗೂ ಎಲ್ಲಾ ಕ್ಷೇತ್ರಗಳಲ್ಲಿಯೂ ಅಭಿವೃದ್ಧಿ ಆಗುತ್ತಿದೆ. ಅವನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿಸಲು ಹಾಗೂ ತಮ್ಮ ಸೇವೆ ಮಾಡಲು ಬೆಂಬಲಿಸಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಅವರು ಮನವಿ ಮಾಡಿದರು.

ವಿಜಯಪುರ ನಗರ ಮತಕ್ಷೇತ್ರ ವ್ಯಾಪ್ತಿಯ ವಾರ್ಡ 26ರ ವ್ಯಾಪ್ತಿಯ ದಿವಟಗೇರಿ ಗಲ್ಲಿಯಲ್ಲಿ ಬಿಜೆಪಿ ನಗರ ಮಂಡಲ ವತಿಯಿಂದ ವಿಜಯಪುರ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರ ಪ್ರಚಾರಾರ್ಥವಾಗಿ ಹಮ್ಮಿಕೊಂಡಿದ್ದ ಬಾವುರಾವ ದೇಶಪಾಂಡೆ ಮಹಾಶಕ್ತಿ ಕೇಂದ್ರದ ಸಭೆಯಲ್ಲಿ ಅವರು ಮಾತನಾಡಿದರು.

ನಿರೀಕ್ಷೆ ಮೀರಿ ಅನುದಾನ ತರುವ ಮೂಲಕ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದೇನೆ. ಕಾಂಗ್ರೆಸ್ ಪಕ್ಷದವರು ಸೋಲುವ ಹತಾಸೆಯಿಂದ ಇಲ್ಲ ಸಲ್ಲದ ಸುಳ್ಳು ಹೇಳುತ್ತಿದ್ದಾರೆ ಎಂದರು.

ಯುವ ಮುಖಂಡರು ಹಾಗೂ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ನಿರ್ದೇಶಕರಾದ ರಾಮನಗೌಡ ಪಾಟೀಲ ಯತ್ನಾಳ ಮಾತನಾಡಿ, ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಂದ ಇಂದು ಭಾರತ ಜಗತ್ತಿನಲ್ಲಿ ಶ್ರೇಷ್ಠ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ. ನಮ್ಮ ಸುಕ್ಷತೆಗಾಗಿ ಮತ್ತೊಮ್ಮೆ ಮೋದಿಯವರ ಕೈ ಬಲ ಪಡಿಸುವ ಕೆಲಸ ನಮ್ಮಿಂದ ಆಗಬೇಕು. ಕಳೆದ ವಿಧಾನಸಭಾ ಚುನಾವಣೆಯಂತೆ 11 ಗಂಟೆಯೊಳಗಾಗಿ ಪ್ರತಿಯೊಬ್ಬರೂ ತಪ್ಪದೆ ಮತದಾನ ಮಾಡಿದರೆ, ಹೆಚ್ಚಿನ ಲೀಡ್ ಕೊಡಲು ಸಾಧ್ಯವಾಗುತ್ತದೆ ಎಂದರು.

ಮಹಾನಗರ ಪಾಲಿಕೆ ಸದಸ್ಯ ಕಿರಣ ಪಾಟೀಲ ಮಾತನಾಡಿ, ದೇಶಕ್ಕೆ ಮೋದಿಯವರ ಆಡಳಿತ ಅವಶ್ಯವಿದೆ. ಸುರಕ್ಷತೆ ಜೊತೆಗೆ ಅಭಿವೃದ್ಧಿಗಾಗಿ ರಮೇಶ ಜಿಗಜಿಣಗಿ ಅವರನ್ನು ಗೆಲ್ಲಿಸುವ ಮೂಲಕ ಪ್ರಧಾನಿ ಆಯ್ಕೆಗೆ ಕೈ ಎತ್ತಿಸೋಣ ಎಂದರು.

ನಗರ ಮಂಡಲ ಅಧ್ಯಕ್ಷ ಶಂಕರ ಹೂಗಾರ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಬಸವರಾಜ ಬೈಚಬಾಳ, ಪ್ರಧಾನ ಕಾರ್ಯದರ್ಶಿ ಮಳುಗೌಡ ಪಾಟೀಲ, ಮುಖಂಡರಾದ ಕಾಸುಗೌಡ ಬಿರಾದಾರ, ವಿವೇಕಾನಂದ ಡಬ್ಬಿ, ಪ್ರಕಾಶ ಅಕ್ಕಲಕೋಟ, ಲಕ್ಷ್ಮೀ ಕನ್ನೋಳ್ಳಿ, ಮಹಾನಗರ ಪಾಲಿಕೆ ಸದಸ್ಯ ರಾಹುಲ್ ಜಾಧವ ಮತ್ತಿತರರು ಇದ್ದರು. ಪಾಪುಸಿಂಗ್ ರಜಪೂತ ನಿರೂಪಿಸಿದರು.

# ಮನೆಯಲ್ಲಿಯೇ ಮತದಾನ ಮಾಡಿದ ಹಿರಿಯ ಜೀವಿಗಳು



**ತೇರದಾಳ :** ಅತ್ತ ಲೋಕಸಭೆ ಚುನಾವಣೆ ಮೊದಲ ಹಂತದ ಮತದಾನ ನಡೆದರೆ ಇತ್ತ ಎರಡನೇ ಹಂತದ ಚುನಾವಣೆಗೆ 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷಚೇತನ ಮತದಾರರು ಮನೆಯಲ್ಲಿಯೇ ಕುಳಿತು ಶುಕ್ರವಾರ ಮತದಾನ ಮಾಡಿ ತಮ್ಮ ಹಕ್ಕು ಚಲಾಯಿಸಿದರು. ತೇರದಾಳ, ಸಸಾಲಟ್ಟಿ, ಕಾಲತಿಪ್ಪಿ, ಗೋಲಭಾವಿ, ಹನಗಂಡಿ, ತಮದಡ್ಡಿ, ಹಳಿಂಗಳಿ, ಯರಗಟ್ಟಿ ಗ್ರಾಮಗಳಲ್ಲಿ ಹಿರಿಯ ಜೀವಿಗಳು ಮತದಾನ ಮಾಡಿದರು. ಬೆಳಗ್ಗೆಯೇ ಮತದಾನಕ್ಕೆ ನಿಯೋಜನೆಗೊಂಡ ಚುನಾವಣೆ ಸಿಬ್ಬಂದಿ ಮತದಾರರ ಮನೆಗಳಿಗೆ ತೆರಳಿ ಮತದಾನ ಮಾಡುವ ಕುರಿತು ಮಾಹಿತಿ ನೀಡಿ ಮತದಾನ ಮಾಡಿಸಿದರು. ಚುನಾವಣೆ ಆಯೋಗ ಹಿರಿಯರಿಗೆ ಮನೆಯಲ್ಲಿಯೇ ಮತದಾನ ಮಾಡುವ ಅವಕಾಶ ಮಾಡಿಕೊಟ್ಟಿದ್ದು ತುಂಬಾ ಸಂತಸವಾಗಿದೆ. ಈ ವಯಸ್ಸಿನಲ್ಲಿ ಹಾಗೂ ಬಿಸಿಲಿನಲ್ಲಿ ಮತಗಟ್ಟೆಗಳಿಗೆ ಹೋಗಿ ಮತದಾನ ಮಾಡಿ ಬರುವಷ್ಟು ಶಕ್ತಿ ನಮಗೆ ಉಳಿದಿಲ್ಲ ಎಂದು ಮತದಾನ ಮಾಡಿದ ಹಿರಿಯ ಜೀವಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ತೇರದಾಳದಲ್ಲಿ 42 ಹಾಗೂ ಸಸಾಲಟ್ಟಿ ಕಾಲತಿಪ್ಪಿ ಗೋಲಭಾವಿ ಹನಗಂಡಿ ಗ್ರಾಮದಲ್ಲಿ 32 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷಚೇತನ ಮತದಾರರಿದ್ದಾರೆ. ಸಸಾಲಟ್ಟಿ ವ್ಯಾಪ್ತಿಯಲ್ಲಿ ಸೆಕ್ಟರ್ ಅಧಿಕಾರಿ ಶ್ರೀಧರ ನಂದಿಹಾಳ, ಮತದಾನ ನಿಯೋಜಿತ ಅಧಿಕಾರಿಗಳಾದ ಎಸ್. ಎಸ್. ಜಾಂಬೋರೆ, ಎಂ.ಐ. ಮುದ್ದಾಪುರ, ಎಸ್. ಎನ್. ಸಾತಾನೆ ಇದ್ದರು.

# ಲೋಕಸಭಾ ಚುನಾವಣೆ: ಮತಯಂತ್ರ ನಿರ್ವಹಣೆ ತರಬೇತಿ ಚುನಾವಣಾ ಆಯೋಗದ ನಿರ್ದೇಶಾನುಸಾರ ಕಾರ್ಯನಿರ್ವಹಿಸಿ




**ಬಾಗಲಕೋಟೆ :** ಚುನಾವಣಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಚುನಾವಣಾ ಆಯೋಗದ ಮಾರ್ಗಸೂಚಿ ಹಾಗೂ ನಿರ್ದೇಶಾನುಸಾರ ಕಾರ್ಯ ನಿರ್ವಹಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿಗಳಾದ ಜಾನಕಿ ಕೆ.ಎಂ ಹೇಳಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ವಿಧಾನ ಸಭಾವಾರು ಎಪ್ರೀಲ್ 28 ರಿಂದ 29 ವರೆಗೆ ಇವಿಎಂ ಹಾಗೂ ವಿವಿಪ್ಯಾಟ್ ವಿದ್ಯುನ್ಮಾನ ಮತಯಂತ್ರ ಹಾಗೂ ವಿವಿಧ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಅವರು ಮಾತನಾಡಿದರು.

ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಮತಯಂತ್ರದ ಕಮಿಶನ್ನಿಂಗ್ ಕಾರ್ಯದ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ನಿರ್ವಹಿಸುವಂತೆಯೂ ಈ ಪ್ರಕ್ರಿಯೆ ಮುಗಿಯುವರೆಗೂ ಹಾಜರಿದ್ದು, ಮೇಲ್ವಿಚಾರಣೆ ವಹಿಸಬೇಕೆಂದು ಸೂಚಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಹಿನ್ನೆಯಲ್ಲಿ ಬಾಗಲಕೋಟೆ ಲೋಕಸಭಾಕ್ಷೇತ್ರಕ್ಕೆಮೇ7ರಂದುಮತದಾನ ನಡೆಯಲಿದೆ. ಇಲ್ಲಿ ಎರಡು ಬ್ಯಾಲೆಟ್ ಯುನಿಟ್ ಬಳಸಲಾಗುತ್ತಿದೆ. ಚುನಾವಣೆ ಪ್ರಕ್ರಿಯೆಯಲ್ಲಿ ಎಲ್ಲಾ ಅಧಿಕಾರಿಗಳು ಮತ್ತು ಮಾಸ್ಟರ್ ಟ್ರೇನರಗಳು ಜವಾಬ್ದಾರಿಯಿಂದ ಚುನಾವಣಾ ಆಯೋಗ ನೀಡಿರುವ ಹಾಗೂ ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿ ಬಗ್ಗೆ ತಿಳಿದುಕೊಂಡು ಕಾರ್ಯ ನಿರ್ವಹಿಸಬೇಕು ಎಂದರು.

ಚುನಾವಣಾ ಕರ್ತವ್ಯದ ಹಾಗೂ ಇವಿಎಂ ಹಾಗೂ ವಿವಿಪ್ಯಾಟ್‌ಗಳ ನಿರ್ವಹಣೆ ಬಗ್ಗೆ ಸಂಪೂರ್ಣ ಮಾಹಿತಿ ಮನನ ಮಾಡಿಕೊಳ್ಳಬೇಕು. ಏನಾದರೂ ಸಮಸ್ಯೆಗಳಿದ್ದರೆ, ಸಹಾಯಕ ಚುನಾವಣಾಧಿಕಾರಿಗಳನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬೇಕು. ಚುನಾವಣಾ ಕರ್ತವ್ಯವನ್ನು ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದು ಹೇಳಿದರು.

ಮತದಾನದ ದಿವಸ ಸಂಭವನೀಯ ಸವಾಲುಗಳು ಹಾಗೂ ಮತಯಂತ್ರ ಬಳಕೆ ಕುರಿತು ತರಬೇತಿ ಮೂಲಕ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ರಮೇಶ ಕಳಸದ. ಜಿಲ್ಲಾ ಚುನಾವಣಾ ಶಾಖೆಯ ತಹಶೀಲ್ದಾರರಾದ ಪಂಪಣ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮೇಲ್ವಿಚಾರಕರು ಉಪಸ್ಥಿತರಿದ್ದರು.

## ತೇರದಾಳದಲ್ಲಿ ಶ್ರೀರಾಮ ಸೇನೆ ಪ್ರತಿಭಟನೆ

# ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತಕ್ಕೆ ಆಗ್ರಹ



**ತೇರದಾಳ :** ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಹಿಂದೂಗಳಿಗೆ ರಕ್ಷಣೆ ಇಲ್ಲದಂತಾಗಿದೆ. ಆದ್ದರಿಂದ ರಾಜ್ಯದಲ್ಲಿ ರಾಷ್ಟ್ರ ಆಡಳಿತಕ್ಕೆ ಶಿಪಾರಸ್ಸು ಮಾಡಬೇಕೆಂದು ಇಲ್ಲಿನ ಶ್ರೀರಾಮ ಸೇನೆ ತಾಲೂಕು ಘಟಕ ರಾಜ್ಯಪಾಲರನ್ನು ಆಗ್ರಹಿಸಿದರು.

ಹುಬ್ಬಳ್ಳಿಯನೇಹಾಹಿರೇಮಠಸೇರಿದಂತೆಹಿಂದೂಗಳ ಕೊಲೆಗಳನ್ನು ಖಂಡಿಸಿ ಶುಕ್ರವಾರ ಪ್ರತಿಭಟನೆ ನಡೆಸಿ ಮಾತನಾಡಿದರು.

ಕಾಂಗ್ರೆಸ್ ಅಧಿಕಾರಕ್ಕೆಬಂದರೆಸಾಕುಅಲ್ಪಸಂಖ್ಯಾತರು ಬಾಲ ಬಿಚ್ಚುತ್ತಾರೆ. ಹಿಂದೂಗಳ ಕೊಲೆಗೆ ಒಂದು ರೀತಿಯಲ್ಲಿ ಕಾಂಗ್ರೆಸ್ ಪಕ್ಷವೇ ಕಾರಣವಾಗಿದೆ ಎಂದು ಆರೋಪಿಸಿದರು. ನೇಹಾ ಹತ್ಯೆ ತನಿಖೆಯಲ್ಲಿ ಸರಕಾರ ಹಸ್ತಕ್ಷೇಪ ಮಾಡಬಾದರು. ಕೊಲೆ ಆರೋಪಿಗೆ ಕಾನೂನು ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿದರು.

ಮಂಜುನಾಥ ಜಮಖಂಡಿ ಹಿರೇಮಠ, ರಾಮಣ್ಣ ಹಿಡಕಲ್, ಸಂತೋಷ ಅಕ್ಕೆನ್ನವರ, ಬಸವರಾಜ ಕಾಲತಿಪ್ಪಿ, ಆಕಾಶ ತೇಲಿ, ಸದಾಶಿವ ಮಾಳಿ, ಪ್ರವೀಣ ತುಬಚಿ, ವಿಠ್ಠಲ ತಟ್ರಿ ಮತ್ತಿತರಿದ್ದರು.

# ಮುಂದುವರಿದ ಪ್ರತಿಭಟನೆ




**ಮುನವಳ್ಳಿ :** ಹುಬ್ಬಳ್ಳಿ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಪಟ್ಟಣದ ಶ್ರೀ ಪಂಚಲಿಂಗೇಶ್ವರ ವೃತ್ತದಲ್ಲಿ ಸಾರ್ವಜನಿಕರಿಂದ 2ನೇ ದಿನವೂ ಪ್ರತಿಭಟನೆಯು ನಡೆಯಿತು. ಅನೇಕರು ಘಟನೆಯನ್ನು ಖಂಡಿಸಿ ಪ್ರತಿಭಟನೆಯಲ್ಲಿ ಭಾಗವಹಿಸುವ ಮೂಲಕ ಆರೋಪಿತನಿಗೆ ಕಠಿಣ ಶಿಕ್ಷೆಯಾಗಬೇಕೆಂದು ಆಗ್ರಹಿಸಿದರು.

ಡಾ.ನರಸಿಂಹ ಕುಲಕರ್ಣಿ, ಬಿಜೆಪಿ ಮುಖಂಡ ಮಲ್ಲಣ್ಣ ಯಾದವಾಡ, ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಸಗೌಡ ಪಾಟೀಲ ಹಾಗೂ ಪಂಚನಗೌಡ ದ್ಯಾಮನಗೌಡರ ಮಾತನಾಡಿದರು.

ಡಾ.ನಯನಾ ಬಸ್ಮೆ, ಸೌರವ ಚೋಪ್ರಾ, ಈರಣ್ಣ ಚಂದರಗಿ, ಜಗದೀಶ ಕೌಜಗೇರಿ, ಶೇಖರ ಗೋಕಾವಿ, ನಿಂಗನಗೌಡ ಮಲಗೌಡರ, ಸುಭಾಸಗೌಡ ಗಿದಿಗೌಡರ, ಶ್ರೀಕಾಂತ ಮಲಗೌಡರ, ಪ್ರಕಾಶ ನಲವಡೆ, ಮಲ್ಲೇಶ ಸೂಳೆಬಾಂವಿ, ಅಶೋಕ ಗೋಮಾಡಿ, ಶ್ರೀಕಾಂತ ಮಿರಜಕರ, ಕಲ್ಲಪ್ಪ ನಲವಡೆ, ಇತರರು ಉಪಸ್ಥಿತರಿದ್ದರು.

ಶನಿವಾರದಂದು ನಡೆದ ಎರಡನೇ ದಿನದ ಪ್ರತಿಭಟನೆಗೆ ಮುನವಳ್ಳಿ ಪಟ್ಟಣದ ಜನತೆ ಸಂಪೂರ್ಣ ಸಹಕಾರ ನೀಡಿದ್ದು, ಎಲ್ಲ ಅಂಗಡಿ ಮುಗ್ಗಟ್ಟುಗಳನ್ನು ಸಂಪೂರ್ಣ ಬಂದ್ ಮಾಡಲಾಗಿತ್ತು.



ಇಂದು ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ನಗರದ ವಾರ್ಡ್ ನಂ.2 ರಲ್ಲಿ ಕಾಂಗ್ರೆಸ್ ಪರ ಪ್ರಚಾರ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ ಎಸ್.ಜಿ. ನಂಜಯಮಠ, ಪ್ರಕಾಶ ತಪಶೆಟ್ಟಿ, ಬ್ಲಾಕ್ ಅಧ್ಯಕ್ಷರು ರಜಾಕ್ ಬೇನೂರ, ಆನಂದ ಶಿಲ್ಪಿ, ಶ್ರೀನಿವಾಸ್ ಬಳ್ಳಾರಿ, ಶಫೀಕ್ ಜಮಾದಾರ, ಬಾಬು ಇಟಗಿ, ಮಹಮ್ಮದಅಲಿ ತಿಮ್ಮಾಪುರ, ನಗರಸಭೆ ಸದಸ್ಯರಾದ ಕ್ವಾಜಾಸಾಬ ಹೊನ್ನಾಳ, ರಫೀಕ ಹಣಮಸಾಗರ, ಮುನ್ನಾ ಬಾಗವಾನ, ರಿಯಾಜ್ ಮನಿಯಾರ, ಆಬೀದ ಟಂಕಸಾಲಿ, ನದೀಮ್ ಪಠಾಣ, ಶಾಹಿದ್ ಜಿಯಾ ಗುವೆ, ಆರೀಫ ಕಿರಸೂರ, ತಹಶೀಲ್ದಾರ್ ಅಕ್ಬರ್ ಮುಲ್ಲಾ, ಸಲೀಂ ಪಠಾಣ, ಮಲಿಕ್ ಬಾಗವಾನ, ಹಾಜಿಸಾಬ ದಂಡಿನ, ಆರೀಫ ಢಾಲಾಯತ, ಮಲ್ಲು ಮೇಟಿ, ಗೋವಿಂದರಾಜ ಬಳ್ಳಾರಿ, ನಾಗರಾಜ ಹದ್ಲಿ, ಮುತ್ತು ಜೋಳದ, ಅಶೋಕ್ ಲಾಗಲೋಟಿ, ಅಶ್ಫಾಕಹುಸೇನ್, ಹಳ್ಳೂರ, ಬಸು ಹೂವಿನಹಳ್ಳಿ, ರಕ್ಷಿತಾ ಈಟಿ, ರೇಣುಕಾ ನ್ಯಾಮಗೌಡರ, ಮಮ್ತಾಜ ಸೌದಾಗರ, ಮತ್ತು ಇನ್ನೂ ಮುಖಂಡರು ಹಾಗೂ ಕಾರ್ಯಕರ್ತರು ಈ ಸಂದರ್ಭದಲ್ಲಿ ಇದ್ದರು.

# ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡಲು ಕರೆ

**ಧಾರವಾಡ :** ಪ್ರಜಾಪ್ರಭುತ್ವಕ್ಕೆ ಮತ್ತಷ್ಟು ಬೆಳಕು ನೀಡುವ, ಬಲ ತುಂಬುವ ಕಾರ್ಯ ಪ್ರತಿಯೊಬ್ಬರು ಸಾರ್ವತ್ರಿಕ ಚುನಾವಣೆಯಲ್ಲಿ ಭಾಗವಹಿಸುವ ಮತ್ತು ತಪ್ಪದೇ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮೃದ್ಧಿಯ ಬೆಳಕು ಹೆಚ್ಚಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಧಾರವಾಡ ನಗರದ ಕೆಸಿಸಿ ಬ್ಯಾಂಕ ವೃತ್ತದಲ್ಲಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತವಾಗಿ ಮತದಾರ ಜಾಗೃತಿಗಾಗಿ ಆಯೋಜಿಸಿದ್ದ ಪಂಜಿನೊಂದಿಕೆ ಯುವ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು.

ಮತದಾನ ನಮ್ಮ ಹೆಮ್ಮೆ. ಅದು ನಮ್ಮ ಅಭಿಮಾನದ ಸಂಕೇತ. ಭಾರತೀಯರಾದ ನಾವು ಪ್ರತಿಯೊಬ್ಬರು ನಮ್ಮ ಸಂವಿದಾನ ನೀಡಿರುವ ಹಕ್ಕನ್ನು ತಪ್ಪದೇ ಚಲಾಯಿಸಬೇಕು. ಪ್ರತಿಯೊಬ್ಬರು ಚಲಾಯಿಸುವ ಮತ ದೇಶದ ಅಭಿವೃದ್ಧಿ, ಸ್ಥಿರತೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುತ್ತದೆ ಎಂದರು. ಮತದಾನವು ಪ್ರಜ್ವಲಿಸುವ ಜ್ಯೋತಿ ಇದ್ದಂತೆ. ಮೊದಲ ಬಾರಿಗೆ ಮತದಾನದ ಹಕ್ಕು ಪಡೆದಿರುವ ಯುವ ಸಮೂಹ ಮತ್ತು ಯುವ ಪಡೆ ಮತದಾನದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ತಮ್ಮ ಕುಟುಂಬ ಸದಸ್ಯರು ಮತದಾನ ಮಾಡುವಂತೆ ಮಾಡುವ ಮೂಲಕ ಇನ್ನಷ್ಟು ಪ್ರಜಾಪ್ರಭುತ್ವ ಸದೃಢಗೊಳಿಸಲು ತಮ್ಮ ಸೇವೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಆಗಿರುವ ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ., ಅವರು ಮಾತನಾಡಿ, ಜಿಲ್ಲೆಯ ಮತದಾನ ಹೆಚ್ಚಳಕ್ಕೆ ಎಲ್ಲರೂ ಕೈ ಜೋಡಿಸಬೇಕು. ಸುಶಿಕ್ಷಿತರ ಜಿಲ್ಲೆಯಲ್ಲಿ ಮತದಾನ ಕಡಿಮೆ ಆಗಬಾರದು. ಮತದಾನ ಹೆಚ್ಚಳಕ್ಕೆ ಜಿಲ್ಲೆಯ ಎಲ್ಲರೂ ಶ್ರಮಿಸಬೇಕು ಎಂದರು.

ಮತದಾನ ಜಾಗೃತಿಗಾಗಿ ವಿದ್ಯಾರ್ಥಿಗಳಿಂದ ಪಾಲಕರಿಗೆ ಓಲೆ, ಮತ ಚಿತ್ರಶಿಬಿರ, ಮಕ್ಕಳಿಗೆ ಸ್ಪರ್ಧೆ, ಜಾಥಾ ಮುಂತಾದವುಗಳ ಮೂಲಕ ಅರಿವು ಮೂಡಿಸಲಾಗಿದೆ. ಶಾಲಾ ಕಾಲೇಜು ವಿದ್ಯಾರ್ಥಿಗಳು ಮತಸೇವಕರಾಗಿ ತೊಡಗಿಸಿಕೊಳ್ಳಬೇಕು. ಪಂಜಿನ ಮೆರವಣಿಗೆ ಸಾರ್ವಜನಿಕರಲ್ಲಿ ಮತದಾನ ಅರಿವು ಹೆಚ್ಚಿಸುತ್ತದೆ ಎಂದು ಹೇಳಿದರು.



ಹುಬ್ಬಳ್ಳಿಧಾರವಾಡ ಮಹಾನಗರಪಾಲಿಕೆ ಆಯುಕ್ತ ಹಾಗೂ ಹುಬ್ಬಳ್ಳಿ ಧಾರವಾಡ ಕೇಂದ್ರ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಡಾ.ಈಶ್ವರ ಉಳ್ಳಾಗಡ್ಡಿ ಅವರು ಮಾತನಾಡಿ, ಅವಳಿನಗರದಲ್ಲಿ ಪ್ರಸಕ್ತ ಸಾಲಿನ ಲೋಕಸಭಾ ಚುನಾವಣೆಯಲ್ಲಿ ಶೇ.85 ರಷ್ಟು ಮತದಾನ ಮಾಡಿಸುವ ಗುರಿ ಹೊಂದಲಾಗಿದೆ. ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿ ಮರ್ಗದರ್ಶನದಲ್ಲಿ ಅವಳಿನಗರದ ಪ್ರತಿ ವಾರ್ಡ್ ಮತ್ತು ಜನಸಂದಣಿ ಸ್ಥಳಗಳಲ್ಲಿ ಪಾಲಿಕೆ ಸಿಬ್ಬಂದಿಗಳು ವಿಭಿನ್ನವಾದ ಕಾರ್ಯಕ್ರಮಗಳ ಮೂಲಕ ಮತದಾನ ಜಾಗೃತಿ ಮೂಡಿಸುತ್ತಿದ್ದಾರೆ. ಇನ್ನು ಹೆಚ್ಚುಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭಾ ಪಿ., ಅವರು ವಂದಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಗೋಪಾಲ ಲಮಾಣಿ ಕಾರ್ಯಕ್ರಮ ನಿರೂಪಿಸಿದರು.

ಪಂಜಿನ ಮೆರವಣಿಗೆ ಜಾಥಾ ಕಾರ್ಯಕ್ರಮದಲ್ಲಿ ಜಿಲ್ಲಾ ಸ್ವೀಪ ಐಕಾನ್ ಜ್ಯೋತಿ ಸಣಕ್ಕಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಧೀನದ ಮೆಟ್ರಿಕ ನಂತರದ ವಿವಿಧ ವೃತ್ತಿಪರ, ಪದವಿ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿ, ವಿದ್ಯಾರ್ಥಿನೀಯರು ಭಾಗವಹಿಸಿದ್ದರು.

ಸಾರ್ವಜನಿಕರ ಗಮನ ಸೆಳೆದ ಪಂಜಿನ ಮೆರವಣಿಗೆ: ಜಿಲ್ಲಾಧಿಕಾರಿ ದಿವ್ಯ ಪ್ರಭು ಹಾಗೂ ಸಿಇಓ ಸ್ವರೂಪ ಟಿ.ಕೆ.ಅವರ ನೇತೃತ್ವದಲ್ಲಿ ಧಾರವಾಡ ನಗರ ಹೃದಯ ಭಾಗದಲ್ಲಿರುವ ಕೆಸಿಸಿ ಬ್ಯಾಂಕ್ ವೃತ್ತದಲ್ಲಿ ಮತದಾನ ಜಾಗೃತಿಯ ಘೋಷಣೆಗಳೊಂದಿಗೆ ಆರಂಭವಾದ ಯುವ ಸಮೂಹದ ಪಂಜಿನ ಮೆರವಣಿಗೆ ಜಾಥಾ ಕಾರ್ಯಕ್ರಮವು ಮಾರುಕಟ್ಟೆಯಲ್ಲಿ ನೆರೆದಿದ್ದ ಸಾರ್ವಜನಿಕರ ಗಮನ ಸೆಳೆಯಿತು. ಪಂಜಿನ ಜಾಥಾವು ಸುಭಾಸ ರಸ್ತೆ, ವಿವೇಕಾನಂದ ವೃತ್ತ, ಹಳೆ ಬಸ್ ನಿಲ್ದಾಣ, ರಾಣಾ ಪ್ರತಾಪ ಸಿಂಹ ಸರ್ಕಲ್, ಅಂಬೇಡ್ಕರ ಪ್ರತಿಮೆ ಬಳಿಯಿಂದ ಆಲೂರು ವೆಂಕಟರಾವ ವೃತ್ತದಲ್ಲಿ ಮಾನವ ಸರಪಳಿ ಸೃಷ್ಟಿಸಿ, ಜನರ ಗಮನ ಸೆಳೆಯಿತು. ಜಾಥಾದಲ್ಲಿ ಭಾಗವಹಿಸಿದ್ದ ಎಲ್ಲ ವಿದ್ಯಾರ್ಥಿಗಳಿಗೆ ಮತ್ತು ನೆರೆದ ಸಾರ್ವಜನಿಕರಿಗೆ ಮತದಾನ ದಿನದಂದು ತಪ್ಪದೇ ಮತದಾನ ಮಾಡವಂತೆ ಪ್ರತಿಜ್ಞಾ ಬೋಧಿಸಲಾಯಿತು. ಜಾಥಾವು ಮಹಾನಗರ ಪಾಲಿಕೆ ಆವರಣದಲ್ಲಿ ಮುಕ್ತಾಯಗೊಂಡಿತು.

## ಮತದಾನ ಜಾಗೃತಿ ಮೂಡಿಸಲು ಸಹಿ ಸಂಗ್ರಹ ಅಭಿಯಾನ

**ನರಗುಂದ :** ಯುವ ಮತದಾರರಲ್ಲಿ ಕಡ್ಡಾಯ ಮತದಾನ ಜಾಗೃತಿ ಮೂಡಿಸಲು ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಯುವ ಮತದಾರರಲ್ಲಿ ಕಡ್ಡಾಯ ಮತದಾನ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ವಿದ್ಯಾರ್ಥಿಗಳಿಗೆ ಸಹಿ ಸಂಗ್ರಹ ಅಭಿಯಾನ ಆಯೋಜಿಸಲಾಯಿತು. ಸಹಿ ಸಂಗ್ರಹ ಅಭಿಯಾನದಲ್ಲಿ ಭಾಗಿಯಾದ ಯುವ ಮತದಾರರು ಕಡ್ಡಾಯವಾಗಿ ಮತದಾನ ದಿನ ಮತದಾನ ಮಾಡುವ ಕುರಿತು ಸಂಕಲ್ಪ ಮಾಡಿ ಸಹಿ ಸಂಗ್ರಹ ಅಭಿಯಾನದಲ್ಲಿ ರುಜು ಹಾಕಿದರು. ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಯುವ ಮತದಾರರಲ್ಲಿ ಕಡ್ಡಾಯ ಮತದಾನ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಯುವ ಮತದಾರರ ಸಹಿ ಸಂಗ್ರಹ ಅಭಿಯಾನದಲ್ಲಿ ಆಯೋಜಿಸಲಾಗಿತ್ತು.

ಅಭಿಯಾನದಲ್ಲಿ ನರಗುಂದ ವಿಧಾನಸಭೆ ಸಹಾಯಕ ಚುನಾವಣೆ ಅಧಿಕಾರಿ ಡಾ.ಹಂಪಣ್ಣ ಸಜ್ಜನ ಮಾತನಾಡಿ, ಸಂವಿಧಾನ ನೀಡಿರುವ ಮತದಾನ ಹಕ್ಕನ್ನು ಚಲಾಯಿಸಿದೆ ಜನಪ್ರತಿನಿಧಿಗಳನ್ನು ಸೌಲಭ್ಯ ಒದಗಿಸಿ ಅಂತ ಕೇಳುವುದಕ್ಕಿಂತ ಮತ ಚಲಾಯಿಸಿ ಸೌಲಭ್ಯ ಕೇಳವುದು ಉತ್ತಮ ಮತದಾರನ ನಡೆಯಾಗಿದೆ. ಸಮಾಜದಲ್ಲಿ ವಿವಿಧ ಸೌಲಭ್ಯಗಳಿಗಾಗಿ



ಜನಪ್ರತಿನಿಧಿಗಳನ್ನು ಪ್ರಶ್ನಿಸುವ ಮತದಾರರ ಸಂಖ್ಯೆ ದೊಡ್ಡದಿದೆ. ಹಲವು ಮತದಾರರು ಮತದಾನ ದಿನ ಮತ ಚಲಾಯಿಸಿದೇ ಚುನಾವಣೆ ಬಳಿಕ ಜನಪ್ರತಿನಿಧಿಗಳನ್ನು ಪ್ರಶ್ನಿಸುವ ಸಂಪ್ರದಾಯ ಹೊಂದಿರುವುದು ಸರಿಯಲ್ಲ. ಮತದಾನ ದಿನ ಯೋಗ್ಯ ಅಭ್ಯರ್ಥಿಗೆ ಮತ ಹಾಕಿ ಜನಪ್ರತಿನಿಧಿಗಳನ್ನು ಸೌಲಭ್ಯಗಳಿಗಾಗಿ ಪ್ರಶ್ನಿಸುವುದು ಉತ್ತಮ ಮತದಾರನ ಲಕ್ಷಣವಾಗಿದೆ ಅಂತ ಅಭಿಪ್ರಾಯಪಟ್ಟರು.

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೋಮಶೇಖರ್ ಬಿರಾದಾರ ಮಾತನಾಡಿ, ಸಮಾಜದ ಎಲ್ಲ ಕ್ಷೇತ್ರಗಳಲ್ಲೂ ಸ್ವೀಪ್ ಸಮಿತಿ ವತಿಯಿಂದ ಕಡ್ಡಾಯ ಮತದಾನ ಜಾಗೃತಿ ಮೂಡಿಸಲಾಗುತ್ತಿದೆ. ಯುವ ಮತದಾರರಲ್ಲಿ ಮತದಾನ ಜಾಗೃತಿ ಮೂಡಿಸಲು ಸಹಿ ಸಂಗ್ರಹ ಅಭಿಯಾನದಂತ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜವಾಬ್ದಾರಿಯನ್ನು ಹೆಚ್ಚಿಸುವ ಕೆಲಸ ಮಾಡುತ್ತದೆ. ಮೊದಲ ಬಾರಿಗೆ ಮತದಾನ ಮಾಡುತ್ತಿರುವ ವಿದ್ಯಾರ್ಥಿಗಳು ಯಾವುದೇ ಆಮಿಷಕ್ಕೆ ಒಳಗಾಗದೇ ದೇಶಕ್ಕೆ ಕೀರ್ತಿ ತರುವ ಸಂಸದರನ್ನು ಆಯ್ಕೆಗೊಳಿಸಲು ಮುಂದಾಗಿ ಅಂತ ಹೇಳಿದರು. ನರಗುಂದ ತಹಶೀಲ್ದಾರ ಶ್ರೀಶೈಲ ತಳವಾರ ಮಾತನಾಡಿ, ಆಧುನೀಕ ತಂತ್ರಜ್ಞಾನ ಯುಗದಲ್ಲಿರುವ ಎಂಜಿನಿಯರಿಂಗ್ ವಿದ್ಯಾರ್ಥಿಗಳು ಮತದಾನ ಪ್ರಕ್ರಿಯೆ?? ಬಗ್ಗೆ ತಿಳಿದುಕೊಂಡಿರಬೇಕು.

ಮತಯಂತ್ರಗಳ ಕಾರ್ಯಕ್ಷಮತೆ ಮತ್ತು ಗೌಪ್ಯತೆ ಹಾಗೂ ಚುನಾವಣೆ ನಡೆಯುವ ಪ್ರತಿ ಹಂತಗಳನ್ನು ತಿಳಿದಿರಬೇಕು. ಜೊತೆಗೆ ಕೇವಲ ಮಾಹಿತಿಯನ್ನು ತಿಳಿದುಕೊಳ್ಳದೇ ಸುತ್ತಮುತ್ತಲಿನ ಜನರಿಗೂ ಪಾರದರ್ಶಕ ಚುನಾವಣೆ ಪ್ರಕ್ರಿಯೆ ಬಗ್ಗೆ ವಿದ್ಯಾರ್ಥಿಗಳು ತಿಳಿಸುವಂತ ಕಾರ್ಯ ಮಾಡಬೇಕು ಎಂದರು. ಅಭಿಯಾನದಲ್ಲಿ ಭಾಗವಹಿಸಿದ್ದ 250 ಕ್ಕೂ ಅಧಿಕ ಯುವ ಮತದಾರ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಕಾಲೇಜಿನ ಎನ್.ಎಸ್.ಎಸ್ ಸಂಯೋಜಕ ಬಸವರಾಜ ಹೊಸಕೋಟಿ, ಅವರು ಕಡ್ಡಾಯ ಮತದಾನದ ಪ್ರತಿಜ್ಞಾವಿಧಿ ಬೋಧಿಸಿದರು.

## ಹುಬ್ಬಳ್ಳಿ: ಕಳಸಾರೋಹಣ ಕಾರ್ಯಕ್ರಮ





**ಹುಬ್ಬಳ್ಳಿ :** ನಗರದ ಹಳೇಹುಬ್ಬಳ್ಳಿ ಬಾಗಾಪೇರ್ಟ್ 1ನೇ ಕ್ರಾಸ್‌ನಲ್ಲಿ ಶ್ರೀ ಮಾರುತಿ ದೇವಸ್ಥಾನದ ನೂತನ ಗೋಪುರ ಕಳಸಾರೋಹಣ ಮತ್ತು ನೂತನ ನಾಗದೇವರ ಮೂರ್ತಿ ಪ್ರತಿಷ್ಠಾಪನ ಹಾಗೂ ಹನುಮ ಜಯಂತಿ ಕಾರ್ಯಕ್ರಮ ನೆರವೇರಿತು.

ಕಾರ್ಯಕ್ರಮ ದಿವ್ಯ ಸಾನಿಧ್ಯವನ್ನು ಶ್ರೀ ತಪೋರತ್ನ ರೇವಣಸಿದ್ಧ ಶಿವಾಚಾರ್ಯ ಮಹಾಸ್ವಾಮಿಗಳು ಹನ್ನೆರಡುಮಠ ಕಲಘಟಗಿ ವಹಿಸಿದ್ದರು. ವಿಶ್ವೇಶ್ವರಯ್ಯ ಹಿರೇಮಠ ವೇದಮೂರ್ತಿ ಫಕೀರಯ್ಯ ಹಿರೇಮಠ ಪೂಜಾ ಕಾರ್ಯಕ್ರಮವನ್ನು ನೆರವೇರಿಸಿದರು. ದಿ. 21 ರಿಂದ ದಿ. 24 ರವರೆಗೆ ಕಾರ್ಯಕ್ರಮದಲ್ಲಿ ಮಾರುತಿ ದೇವಸ್ಥಾನ ಸೇವಾ ಸಮಿತಿ, ಮಹಿಳಾ ಮಂಡಳ ಗುರುಹಿರಿಯರು, ಮಾತೆಯರು ಸುತ್ತು ಮುತ್ತಲಿನ ನಾಗರಿಕರು ಭಾಗವಹಿಸಿ ವಿಜೃಂಭಣೆಯಿಂದ ನಡೆಯಿತು. ಬ್ರಾಹ್ಮಿ ಮುಹೂರ್ತದಲ್ಲಿ ನೂತನ ನಾಗದೇವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ನೂತನ ಗೋಪುರಕ್ಕೆ ಕಳಸಾರೋಹಣ ಮಾಡಿ ರುದ್ರಾಭಿಷೇಕ, ನವಗ್ರಹ ಹೋಮ, ಧಾರ್ಮಿಕ ಪೂಜಾ ಕಾರ್ಯಕ್ರಮ ನೆರವೇರಿತು. ಅನ್ನಸಂತರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಬಡಾವಣೆಗಳು ನಾಗರೀಕರು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ಬಿಜೆಪಿ ಕಾರ್ಯಕರ್ತರಿಂದ ಬಿರುಸಿನ ಪ್ರಚಾರ



**ರಬಕವಿ-ಬನಹಟ್ಟಿ :** ಬಾಗಲಕೋಟೆ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬನಹಟ್ಟಿಯ ವಾರ್ಡ್ ನಂ. 10 ರಲ್ಲಿ ಬಿಜೆಪಿ ಕಾರ್ಯಕರ್ತರು ಬಿರುಸಿನ ಪ್ರಚಾರ ನಡೆಸಿದರು.

ಮನೆ ಮನೆಗೆ ತೆರಳಿ ಮೋದಿಯವರ ಸಾಧನೆಯ ಕರಪತ್ರ ಹಂಚುವುದರ ಮೂಲಕ ಮತಯಾಚನೆ ನಡೆಸಿದರು. ಈ ಸಂದರ್ಭದಲ್ಲಿ ಸದಾಶಿವ ಪರೀಟ, ಶ್ರೀಶೈಲ ಗಸ್ತಿ, ಆನಂದ ಬಂಗಿ, ಪ್ರಕಾಶ ಪವಾರ, ಬಸಪ್ಪ ಕರೋಳಿ, ತಿಪ್ಪಣ್ಣ ಹಲಗಲಿ, ಗಂಗಯ್ಯ ಮಠಪತಿ, ಶಿವಯ್ಯ ಬಂಗಿ, ರಾಜು ಅರ್ಥಲೆ, ಚನ್ನಪ್ಪ ಕೆಸರಗೊಪ್ಪ , ಉದಯ ಕೊಣ್ಣೂರ, ಮಹಾದೇವ ಮುಗಳೊಳ್ಳಿ , ಯಾಸಿನ ತಾಂಬೋಳಿ, ರಮೇಶ ಅವರಸಂಗ, ರವಿ ಮಠದ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

## ತೇರದಾದಲ್ಲಿ ಗದ್ದಿಗೌಡರ ಮತ ಭೇಟೆ
## ದೇಶದ ಸಮೃದ್ಧಿ ಕೇವಲ ಬಿಜೆಪಿಯಿಂದ ಮಾತ್ರ ಸಾಧ್ಯ

**ತೇರದಾಳ :** ನಾಲ್ಕು ದಶಕಗಳ ಕಾಲ ಅಧಿಕಾರ ನಡೆಸಿದ ಕಾಂಗ್ರೆಸ್ ಗರಿಬಿ ಹಟಾವೋ ಹೆಸರಿನಲ್ಲಿ ಗರಿಬೋಂಕೋ ಹಟಾವೋ ಕೆಲಸ ಮಾಡಿದೆ. ಭಾರತ ದೇಶದ ಸಮೃದ್ಧಿ ಕೇಲವ ಬಿಜೆಪಿ ಪಕ್ಷದಿಂದ ಮಾತ್ರ ಸಾಧ್ಯ ಇದೆ ಎಂದು ಲೋಕಸಭೆ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡರ ಹೇಳಿದರು.

ಶುಕ್ರವಾರ ಪಟ್ಟಣದಲ್ಲಿ ಮತಯಾಚನೆ ನಡೆಸಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಕೇವಲ ಗ್ಯಾರಂಟಿ ಯೋಜನೆಗಳ ಮೇಲೆ ಮತಯಾಚನೆ ನಡೆಸುತ್ತಿದೆ. ಆದರೆ ಕೇಂದ್ರದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಕೊಡುಗೆ ಹಾಗೂ ಆಡಳಿತವನ್ನು ಜಗತ್ತಿನ ಹಲವು ರಾಷ್ಟ್ರಗಳು ಮೆಚ್ಚಿಕೊಂಡಿವೆ. ಕಾಂಗ್ರೆಸ್ ಸರಕಾರದಿಂದ ಯಾವುದೇ ಅಭಿವೃದ್ಧಿ ಸಾಧ್ಯವಿಲ್ಲ. ಆದ್ದರಿಂದ ದೇಶದ ಭದ್ರತೆಗೆ



ಮೋದಿ ಮತ್ತೊಮ್ಮೆ ಪ್ರಧಾನಿ ಆಗಬೇಕಿದೆ. ಆ ದಿಸೆಯಲ್ಲಿ ಬಿಜೆಪಿಗೆ ಮತದಾರರು ಮತ ನೀಡಬೇಕೆಂದು ಮನವಿ ಮಾಡಿದರು. ಶಾಸಕ ಸಿದ್ದು ಸವದಿ, ಡಾ. ಮಹಾವೀರ ದಾನಿಗೊಂಡ, ಬಿಜೆಪಿ ನಗರ ಘಟಕ ಅಧ್ಯಕ್ಷ ಮಹಾವೀರ ಕೊಕಟನೂರ, ಅಪ್ಪು ಮಂಗಸೂಳಿ, ಡಾ. ಪುಷ್ಪದಂತ ದಾನಿಗೊಂಡ, ರಾಮಣ್ಣ ಹಿಡಕಲ್, ಅಲ್ಲಪ್ಪ ಬಾಬಗೊಂಡ, ಸಂತೋಷ ಜಮಖಂಡಿ, ಸಿದ್ದು ಅಮ್ಮಣಗಿ, ಸಂತೋಷ ಅಕ್ಕೆನ್ನವರ, ಆನಂದ ಮಧುಮಲಿ, ಶೀತಲ ಬೋಳಗೊಂಡ, ಕಾಶಿನಾಥ ರಾಠೋಡ, ಭುಜಬಲಿ ಕೆಂಗಾಲಿ, ಪ್ರವೀಣ ತುಬಚಿ, ಷಣ್ಮುಖ ಗಾಡದಿ, ವಿಠ್ಠಲ ತಟ್ರಿ, ರಾಮಣ್ಣ ಹೊಸಮನಿ, ಅಲ್ಲಪ್ಪ ಮದಲಮಟ್ಟಿ, ವಿಜಯ ಶಿರಗಾಂವಿ, ಶೀತಲ ಗೂಳನ್ನವರ ಮತ್ತಿತರಿದ್ದರು.

## ಡಾ. ಪದ್ಮಜೀತ ನಾಡಗೌಡ ಮರಳಿ ಕಾಂಗ್ರೆಸ್ಸಿಗೆ?



**ರಬಕವಿ :** ಇಲ್ಲಿಯ ನೇತ್ರ ತಜ್ಞರಾಗಿರುವ ಡಾಕ್ಟರ್ ಪದ್ಮಜೀತ ನಾಡಗೌಡ ಪಾಟೀಲ ಅವರು ಏಪ್ರೀಲ್ 27 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬನಹಟ್ಟಿಗೆ ಆಗಮಿಸಿದ್ದ ಸಂದರ್ಭದಲ್ಲಿ, ಮರಳಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಳ್ಳಲಿದ್ದಾರೆಂದು ತಿಳಿದುಬಂದಿದೆ.

## ಅಲ್ಪಸಂಖ್ಯಾತರ ಒಲವು ಕಾಂಗ್ರೆಸ್ಸಿಗಿದೆ



**ರಬಕವಿ-ಬನಹಟ್ಟಿ :** ಬಾಗಲಕೋಟೆ ಮತ ಕ್ಷೇತ್ರದ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿರುವ ಸಂಯುಕ್ತಾ ಪಾಟೀಲರಿಗೆ ಅಲ್ಪಸಂಖ್ಯಾತರ ಒಲವು ಸಂಪೂರ್ಣವಾಗಿದೆ ಎಂದು ತೇರದಾಳ ಕ್ಷೇತ್ರ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ನೂತನ ಅಧ್ಯಕ್ಷ ಇರ್ಷಾದ್ ಮೋಮಿನ್ ತಿಳಿಸಿದರು.

ಬನಹಟ್ಟಿಯಲ್ಲಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆ ಮುಸ್ಲಿಂ ಸಮಾಜದಿಂದ ಅವರನ್ನು ಗೌರವಿಸಿದರು. ಈ ಬಾರಿ ತೇರದಾಳ ಕ್ಷೇತ್ರದಲ್ಲಿ ಅಹಿಂದ್ ಜೊತೆಗೆ ಎಲ್ಲ ಸಮುದಾಯಗಳ ಬೆಂಬಲ ಹೆಚ್ಚಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗು ಸಿ.ಎಂ. ಕಾರ್ಯಗಳಿಗೆ ಜನರು ಅದರಲ್ಲೂ ಮಹಿಳೆಯರು ಸ್ವಯಂಪ್ರೇರಿತ ಬೆಂಬಲ ವ್ಯಕ್ತಪಡಿಸುತ್ತಿರುವುದೇ ಪಾಟೀಲರ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಮೋಮಿನ್ ತಿಳಿಸಿದರು.

ಅಂಜುಮನ್-ಇಸ್ಲಾಂ ಕಮಿಟಿ ಅಧ್ಯಕ್ಷ ಬುಡಾನ್ಸಾಬ ಜಮಾದಾರ, ಯುನುಸ್ ನಿಪ್ಪಾಣಿ, ಮೌಲಾಸಾಬ ಸಂತಿ, ಮುಸ್ತಾಕ ಶೇಖ್, ಮೆಹಬೂಬ ಡಾಂಗೆ, ಸಲೀಂ ಬಾರಿಗಡ್ಡಿ, ಆರೀಫ್ ಅತ್ತಾರ, ಆಜಾದ ಮೇಸ್ತ್ರಿ , ಯುಸುಫ್ ಮಹಾಲಿಂಗಪೂರ, ಅಬೂಬಕರ ಮಂಟೂರ, ಹಾರೂನ ಬೇವೂರ, ರಫೀಕ್ ಜಕಾತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಅರಿಶಿನ ಬೀಜಗಳ ಕೊರತೆ: ಗಗನಕ್ಕೇರುತ್ತಿರುವ ಬೆಲೆ

### ಚಿನ್ನಾ ಸೇಲಂ ಬೀಜಗಳಿಗೆ ಭಾರಿ ಬೇಡಿಕೆ । ಅರಿಶಿನ ಬೀಜಗಳನ್ನು ಖರೀದಿಸಲು ಮುಗಿಬಿದ್ದ ರೈತರು

ಕಿರಣ ಶ್ರೀಶೈಲ ಆಳಗಿ

**ರಬಕವಿ-ಬನಹಟ್ಟಿ :** ಪ್ರಸಕ್ತ ವರ್ಷ ಮಳೆ ಉತ್ತಮ ರೀತಿಯಲ್ಲಿ ಪ್ರಾರಂಭವಾಗುತ್ತದೆ ಎಂಬ ನಿರೀಕ್ಷೆಯಲ್ಲಿ ಈ ಸಲ ಅರಿಸಿನ ಬೀಜಕ್ಕೆ ಮಾರುಕಟ್ಟೆಯಲ್ಲಿ ಬೇಡಿಕೆ ದುಪ್ಪಟ್ಟಾಗಿದೆ. ಅರಿಸಿನಕ್ಕೆ ಉತ್ತಮ ಬೆಲೆಯೂ ಕೂಡಾ ಇರುವುದರಿಂದ ಈ ಭಾಗದ ರೈತರು ಅರಿಸಿನ ಬೀಜಗಳನ್ನು ಖರೀದಿಸಲು ಮುಗಿ ಬೀಳುತ್ತಿದ್ದಾರೆ.

ಈ ಭಾಗಕ್ಕೆ ತಮಿಳುನಾಡಿನ ಸೇಲಂ ಹಾಗೂ ಕಡಪಾ ಪಟ್ಟಣಗಳಿಂದ ಅರಿಸಿನ ಬೀಜಗಳನ್ನು ಆಮದು ಮಾಡಿಕೊಳ್ಳಲಾಗುತ್ತಿದೆ. ಈ ಬಾರಿ ತಮಿಳುನಾಡಿನಲ್ಲಿ ಮಳೆ ಪ್ರಮಾಣ ತೀರ ಕಡಿಮೆಯಾದ ಕಾರಣ ಅಲ್ಲಿನ ಸೇಲಂ ಪಟ್ಟಣದಲ್ಲಿ ಅರಿಸಿನ ಬೀಜಗಳ ಇಳುವರಿ ಕಡಿಮೆಯಾಗಿದೆ. ಆದ್ದರಿಂದ ಸೇಲಂನಿಂದ ಬರುವ ಅರಿಸಿನ ಬೀಜಗಳ ಪೂರೈಕೆಯೂ ಕಡಿಮೆಯಾಗಿದ್ದರಿಂದ ಇಲ್ಲಿ ಬೇಡಿಕೆ ಹೆಚ್ಚಾಗಿ ಬೆಲೆ ಕೂಡಾ ಗಗನಕ್ಕೇರಲು ಕಾರಣವಾಗಿದೆ ಎನ್ನುತ್ತಾರೆ ಇಲ್ಲಿನ ಬೀಜಗಳ ವ್ಯಾಪಾರಸ್ಥರಾದ ಜಗದಾಳದ ದೇವರಾಜ ರಾಠಿ.

ಸೇಲಂ ನಲ್ಲಿ ಮಳೆಯಾಗದ ಕಾರಣ ಕೆಲವೇ ಕೆಲವು ರೈತರಲ್ಲಿ ಮಾತ್ರ ಅರಿಸಿನ



ಬೀಜಗಳ ಸಂಗ್ರಹವಿದೆ. ಮುಂದಿನ ದಿನಗಳಲ್ಲಿ ಬೀಜಗಳ ಬೆಲೆ ಇನ್ನಷ್ಟು ಹೆಚ್ಚಾಗುತ್ತದೆ ಎಂದು ಅವುಗಳನ್ನು ಸಂಗ್ರಹ ಮಾಡಿಟ್ಟುಕೊಂಡಿದ್ದಾರೆ. ಆದ್ದರಿಂದ ಕರ್ನಾಟಕದಲ್ಲಿ ಬೀಜಗಳ ಕೊರತೆಯಾಗಿದೆ ಮತ್ತು ಬೆಲೆಗಳು ಕೂಡಾ ಹೆಚ್ಚಾಗಿದೆ. ಕಳೆದ ಸಲ ಒಂದು ಕ್ವಿಂಟಲ್ ಓರಿಜನಲ್ ಚಿನ್ನಾ ಸೇಲಂ ಎಂಬ ಹೆಸರಿನ ಬೀಜಕ್ಕೆ ರೂ. ೪,೦೦೦ ಇತ್ತು. ಆದರೆ ಈ ಬಾರಿ ರೂ. ೭,೮೦೦ ರವರೆಗೆ ಮಾರಾಟವಾಗುತ್ತಿದೆ. ನಾಂದೇಡ ಸೇಲಂ ೬,೦೦೦ ರಿಂದ ೫,೫೦೦ ವರೆಗೆ ಇದ್ದು , ಬೆಲೆ ಇನ್ನಷ್ಟು ಹೆಚ್ಚಾಗುವ ಸಂಭವವಿದೆ ಎನ್ನುತ್ತಾರೆ ವ್ಯಾಪಾರಸ್ಥರು.

ಈ ಭಾಗದಲ್ಲಿ ಉತ್ತಮ ಮಳೆಯಾಗುತ್ತದೆ ಎಂಬ ಅಪಾರ ನಂಬಿಕೆಯ ಮೇಲೆ ರೈತರು ಹೆಚ್ಚಿನ ಪ್ರಮಾಣದಲ್ಲಿ ಅರಿಸಿನ ನಾಟಿಗೆ ಸಜ್ಜಾಗುತ್ತಿದ್ದಾರೆ.

ಜಗದಾಳ, ನಾವಲಗಿ ಗ್ರಾಮಗಳ ಸುತ್ತ ಮುತ್ತಲಿನ ಭಾಗದಲ್ಲಿ ಅಂದಾಜು ೧೦೦ ಟನ್ನೂ ಹೆಚ್ಚು ಅರಿಸಿನ ಬೀಜಗಳು ಮಾರಾಟವಾಗುತ್ತವೆ. ಒಂದು ಲಾರಿಯಲ್ಲಿ ೧೦ ರಿಂದ ೧೬ ಟನ್ ನಷ್ಟು ಬೀಜಗಳು ಬರುತ್ತವೆ.

ಜಗದಾಳ ಗ್ರಾಮಕ್ಕೆ ಅರಿಸಿನ ಬೀಜಗಳನ್ನು ಖರೀದಿಸಲು ರಬಕವಿ ಬನಹಟ್ಟಿ , ಜಮಖಂಡಿ, ಗೋಕಾಕ, ರಾಯಬಾಗ ಮತ್ತು ಅಥಣಿ ತಾಲೂಕಿನ ವಿವಿಧ ನಗರ ಮತ್ತು ಗ್ರಾಮೀಣ ಪ್ರದೇಶಗಳಿಂದ ರೈತರು ಆಗಮಿಸುತ್ತಿದ್ದಾರೆ.

ಅರಿಸಿನ ಬೀಜಗಳಲ್ಲಿಯೂ ಕೂಡಾ ಸಾಕಷ್ಟು ಕಲಬೆರೆಕೆಯ ಹಾಗೂ ನಕಲಿ ಬೀಜಗಳು ಬರುತ್ತಿರುವುದರಿಂದ ರೈತರಿಗೆ ತೊಂದರೆಯಾಗಿದೆ. ಆದರೂ ಜಗದಾಳ ಭಾಗದಲ್ಲಿ ಮಾರಾಟವಾಗುವ ಬೀಜ ಉತ್ತಮ ಗುಣಮಟ್ಟದ್ದಾಗಿರುತ್ತದೆ. ಕಳೆದ ಹತ್ತು ವರ್ಷದಿಂದ ಇಲ್ಲಿಯೇ ನಾವು ಬೀಜ ಖರೀದಿ ಮಾಡುತ್ತಿದ್ದೇವೆ. ಕಳೆದ ವರ್ಷ ಮಳೆ ಇಲ್ಲದಿದ್ದರೂ ಈ ವರ್ಷ ಮಳೆ ಬರುತ್ತದೆ ಎಂಬ ನಂಬಿಕೆಯಿಂದ ಬೀಜ ಸಂಗ್ರಹಿಸುತ್ತಿದ್ದೇವೆ ಎಂದು ರಾಯಬಾಗ ತಾಲೂಕಿನ ಚಿಂಚಲಿ ಗ್ರಾಮದ ರೈತ ಕೇಶವ ಬಾಬು ಹಾರೂಗೇರಿ ಪತ್ರಿಕೆಗೆ ತಿಳಿಸಿದರು.

ಒಟ್ಟಿನಲ್ಲಿ ಅರಿಸಿನ ಕೃಷಿ ರೈತರಿಗೆ ಪರಿಶ್ರಮದ ಬೆಳೆಯಾಗಿದ್ದರೂ, ಮಾರುಕಟ್ಟೆಯಲ್ಲಿ ಅರಿಸಿನಕ್ಕೆ ಸಾಂಗ್ಲಿ ಮಾರುಕಟ್ಟೆಯಲ್ಲಿ ಈ ಬಾರಿ ಹದಿನೈದು ಸಾವಿರ ರೂ ಪ್ರತಿ ಕ್ವಿಂಟಲ್ಗೆ ಮಾರಾಟವಾಗುತ್ತಿದೆ.

# ಗುಡುಗು–ಸಿಡಿಲು ಆಘಾತದಿಂದ ಪಾರಾಗಲು ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಲಹೆಗಳು

**ಕೊಪ್ಪಳ :** ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಗುಡುಗು ಮತ್ತು ಸಿಡಿಲು ಬಡಿತ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸಾರ್ವಜನಿಕರು ಅವುಗಳನ್ನು ಕಡ್ಡಾಯವಾಗಿ ಪಾಲಿಸಿ, ನೈಸರ್ಗಿಕ ಅವಘಡಗಳಿಂದ ಆಗುವ ಹಾನಿಯನ್ನು ತಪ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.

ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಗುಡುಗು ಸಿಡಿಲಿನಿಂದಾಗುವ ಅಪಾಯಗಳನ್ನು ತಗ್ಗಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

**ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಸಾರ್ವಜನಿಕರು ಪಾಲಿಸಬೇಕಾದ ಸಲಹೆ ಸೂಚನೆಗಳು:**

ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಮುಖಾಂತರ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ ಸಂದೇಶಗಳನ್ನು ಗಮನಿಸಬೇಕು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗವುದನ್ನು ತಪ್ಪಿಸಬೇಕು. ಗುಡುಗು–ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಾದ ಮನೆಗಳು, ಕಛೇರಿಗಳು, ಅಂಗಡಿಗಳು ಮತ್ತು ಕಿಟಕಿ ಮುಚ್ಚಿರುವಂತಹ ವಾಹನಗಳಲ್ಲಿ ಆಶ್ರಯ ಪಡೆಯಬೇಕು.

ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯಬೇಕು. ಕೆರೆ ಮತ್ತು ನದಿಗಳು ಹಾಗೂ ಇನ್ನಿತರ ನೀರಿನ ಮೂಲಗಳಿಂದ ತಕ್ಷಣವೇ ದೂರವಿರುವುದು, ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರಬೇಕು. ಗುಡುಗು – ಸಿಡಿಲಿನ ಮುನ್ಸೂಚನೆ ಅಥವಾ ಮುನ್ನೆಚ್ಚರಿಕೆ ಇದ್ದಲ್ಲಿ ಪ್ರಯಾಣವನ್ನು ಮುಂದೂಡಬೇಕು ಹಾಗೂ ಮನೆಗಳಲ್ಲಿ ಇರಬೇಕು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯಬೇಕು ಹಾಗೂ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರಬೇಕು. ಮರಗಳು ಮತ್ತು ವಿದ್ಯುತ್ ಲೈನ್‌ಗಳಿಂದ ದೂರ ವಾಹನ ನಿಲುಗಡೆ ಮಾಡಬೇಕು. ಗುಡುಗು ಸಿಡಿಲಿನ ಸಮಯದಲ್ಲಿ ಗುಂಪಿನಲ್ಲಿದ್ದರೆ ಅಪಾಯವನ್ನು ಕಡಿಮೆ ಮಾಡಲು ಸಾಕಷ್ಟು ಅಂತರವನ್ನು ಕಾಯ್ದುಕೊಳ್ಳಬೇಕು.

ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳಬೇಕು. ಮಿಂಚನ್ನು ಆಕರ್ಷಿಸುವಂತಹ ವಿದ್ಯುತ್ ಅಥವಾ ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಅರಣ್ಯ ಪ್ರದೇಶದಲ್ಲಿದ್ದರೆ ಸಣ್ಣ /ಚಿಕ್ಕ ಮರಗಳ ಕೆಳಗೆ ಆಶ್ರಯ ಪಡೆಯಬೇಕು. ಲೋಹದ ವಸ್ತುಗಳನ್ನು ಬಳಸಬಾರದು ಮತ್ತು ಬೈಕುಗಳು, ವಿದ್ಯುತ್ ಅಥವಾ ದೂರವಾಣಿ ಕಂಬಗಳು, ತಂತಿ ಬೇಲಿ, ಯಂತ್ರಗಳು ಇತ್ಯಾದಿಗಳಿಂದ ದೂರವಿರಬೇಕು. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್ ಗಳನ್ನು ಬಳಸಬಾರದು ಹಾಗೂ ವಿದ್ಯುತ್ ಸಂಪರ್ಕ ಹೊಂದಿರುವ ದೂರವಾಣಿಯನ್ನು ಬಳಸಬಾರದು.

ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು. ಗುಡುಗು ಸಿಡಿಲಿನ ಸಮಯದಲ್ಲಿ ಕಿಟಕಿ, ಬಾಗಿಲುಗಳನ್ನು ಮುಚ್ಚಿ ಬೆಂಕಿ ಮತ್ತು ವಿದ್ಯುತ್ ಶಕ್ತಿ ಸಂಪರ್ಕದಿಂದ ದೂರವಿರಬೇಕು. ಮಕ್ಕಳು, ವಯೋವೃದ್ದರು, ಜಾನುವಾರುಗಳನ್ನು ಹಾಗೂ ಸಾಕು ಪ್ರಾಣಿಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಇರುವಂತೆ ಗಮನಹರಿಸಬೇಕು. ಹಾರುವ ಮತ್ತು ಅಪಘಾತಕ್ಕೆ ಕಾರಣವಾಗಬಹುದಾದ ಮರದ ಕಟ್ಟಿಗೆ ಅಥವಾ ಇತರೆ ಯಾವುದೇ ಅವಶೇಷಗಳನ್ನು ತೆಗೆದುಹಾಕಬೇಕು. ಸಿಡಿಲು ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ವಿದ್ಯುತ್ ಹರಿಯುವ ಸಾಧ್ಯತೆ ಇರುವುದರಿಂದ ಸಿಡಿಲು ಉಂಟಾಗುವ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು, ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು. ಗುಡುಗು ಸಿಡಿಲಿನ ಸಮಯದಲ್ಲಿ ಮೋಟಾರ್ ಸೈಕಲ್ ಅಥವಾ ಇನ್ನಿತರೆ ಯಾವುದೇ ತೆರೆದ ವಾಹನಗಳ ಸಂಚಾರವನ್ನು ಮಾಡಬಾರದು.

ಆಟದ ಮೈದಾನ, ಉದ್ಯಾನವನಗಳು, ಈಜುಕೊಳ ಮತ್ತು ಕಡಲ ತೀರಗಳಿಗೆ ಹೋಗುವುದನ್ನು ತಪ್ಪಿಸಬೇಕು. ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಅರಣ್ಯ ಪ್ರದೇಶದಿಂದ ಗಿಡ ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸಬೇಕು. ಮಿಂಚಿನ ಹೊಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿರುವುದರಿಂದ ಎಚ್ಚರಿಕೆ ವಹಿಸಬೇಕು. ಗುಡುಗು ಸಿಡಿಲಿನ ಸಮಯದಲ್ಲಿ ಬಯಲು ಪ್ರದೇಶದಲ್ಲಿ ಸಿಲುಕಿಕೊಂಡಿದ್ದರೆ, ತಕ್ಷಣವೇ ಹತ್ತಿರದಲ್ಲೇ ಇರುವ ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆದು ಅಪಾಯದಿಂದ ಪಾರಾಗಬೇಕು. ಮಿಂಚು ಬರುವ ಸಮಯದಲ್ಲಿ ರಬ್ಬರ್ ಸೋಲ್ ಇರುವ ಪಾದರಕ್ಷೆಗಳು ಮತ್ತು ಕಾರಿನ ಚಕ್ರಗಳು ಸುರಕ್ಷಿತವಲ್ಲದ ಕಾರಣ ಅವುಗಳಿಂದ ದೂರವಿರಬೇಕು.

ವಿದ್ಯುತ್ ಸಂಪರ್ಕ ಹೊಂದಿರುವಂತಹ ವಿದ್ಯುತ್ / ಎಲೆಕ್ಟ್ರಿಕಲ್ ಉಪಕರಣಗಳಾದ ಕಂಪ್ಯೂಟರ್, ಲ್ಯಾಪ್‌ಟಾಪ್, ವಿಡಿಯೋ ಗೇಮ್ ಸಾಧನಗಳು, ಮೊಬೈಲ್ ಫೋನ್, ವಾಷಿಂಗ್ ಮಷಿನ್, ಸ್ಟವ್ ಹಾಗೂ ಇತರೆ ವಿದ್ಯುತ್ ಉಪಕರಣಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಬೇಕು. ಬಾಗಿಲುಗಳು, ಕಿಟಕಿಗಳು, ಮಂಟಪಗಳು, ಕಾಂಕ್ರಿಟ್ ನೆಲ, ಬೆಂಕಿಯ ಸ್ಥಳಗಳು, ಸ್ಟವ್‌ಗಳು, ಬಾತ್‌ಟಬ್‌ಗಳು ಅಥವಾ ಇತರೆ ವಿದ್ಯುತ್ ಉಪಕರಣಗಳಿಂದ ದೂರವಿರಬೇಕು.

**ಸಿಡಿಲು/ಮಿಂಚು ಬಡಿದಾಗ ಪಾಲಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನ :**

ಸಿಡಿಲು / ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 112 / 108 ಸಹಾಯವಾಣಿಗೆ ಕರೆ ಮಾಡಬೇಕು. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ನೀಡುವ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು / ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ದೇಹದಲ್ಲಿ ಯಾವುದೇ ವಿದ್ಯುತ್ ಕಣಗಳು ಸಂಚಾರವಾಗುವುದಿಲ್ಲ. ಆದ್ದರಿಂದ, ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವ ವ್ಯಕ್ತಿಗೆ ಯಾವುದೇ ಅಪಾಯವಿರುವುದಿಲ್ಲ.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಹಾಗೂ ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನು ತಿಳಿಯಬಹುದು. ವ್ಯಕ್ತಿಯಲ್ಲಿ ಉಸಿರಾಟವು ಕಂಡು ಬರದಿದ್ದಲ್ಲಿ ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ ಅಚಿಡಿಜುಚಿಛಿ ಛಿಂಟಠಿಡಿಞಚಿಟಿ ಹಾಗೂ ಅಚಿಡಿಜುಂಠಿಣಟಟಠಿಚಿಡಿಥಿ ಖಜಣಾಛಿ–ಣಚಿಣುಂಟಿ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಕಣ್ಣಿನ ದೃಷ್ಟಿ, ಕಿವಿಕೇಳಿಸುವಿಕೆ ಹಾಗೂ ಮೂಳೆಗಳು ಮುರಿದಿವೆಯೇ ಎಂದು ಪರೀಕ್ಷಿಸಬೇಕು. ಇದರಿಂದ ಪಾರ್ಶ್ವವಾಯು/ ಲಕ್ವಾ ಹೊಡೆಯುವುದನ್ನು ಮತ್ತು ಅಧಿಕ ರಕ್ತಸ್ರಾವದಿಂದ ಉಂಟಾಗುವ ಅಪಾಯಗಳನ್ನು ತಡೆಗಟ್ಟಬಹುದು. ಸಿಡಿಲು ಬಡಿಯುವ ಸಾಧ್ಯತೆಯು ಮುಂದುವರೆಯುವುದರ ಬಗ್ಗೆ ಈಗಾಗಲೇ ಸಿಡಿಲಿನ ಹೊಡೆತಕ್ಕೆ ಒಳಗಾಗಿರುವ ವ್ಯಕ್ತಿ ಹಾಗೂ ಅವರನ್ನು ರಕ್ಷಿಸುವವರು ಎಚ್ಚರವಹಿಸಬೇಕು. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ಅಪಾಯಕಾರಿ ಸ್ಥಳದಲ್ಲಿದ್ದರೆ, ತಕ್ಷಣವೇ ಅವನನ್ನು / ಅವಳನ್ನು ಸೂಕ್ತ ರಕ್ಷಣಾ ಸ್ಥಳಕ್ಕೆ ಸ್ಥಳಾಂತರಿಸಬೇಕು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ವಿವಿಧ ರೀತಿಯ ಸುಟ್ಟಗಾಯಗಳಿಂದ ಬಳಲಬಹುದು ಹಾಗೂ ಕಾಣದ ಗಾಯಗಳು/ ಆಘಾತಕ್ಕೆ ಒಳಗಾಗಿರಬಹುದು. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪಲು ಹಾಗೂ ಸಿಡಿಲು ಬಡಿತಕ್ಕೆ ಒಳಗಾದ ವ್ಯಕ್ತಿಯ ಆರೋಗ್ಯಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿ ನೀಡಬೇಕು ಮತ್ತು ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಬೇಕು.

ವಿಪತ್ತು ನಿರ್ವಹಣಾ ಪ್ರಾಧಿಕಾರ ನೀಡಿರುವ ಸಲಹೆ ಸೂಚನೆಗಳನ್ನು ಪಾಲಿಸುವುದರಿಂದ ಗುಡುಗು ಹಾಗೂ ಸಿಡಿಲಿನಿಂದ

ಆಗುವ ಪ್ರಾಣ ಹಾನಿ ಹಾಗೂ ಇನ್ನಿತರ ಅವಘಡಗಳಿಂದ ಪಾರಾಗಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ನೀಡಿ: ಹಾಲಪ್ಪ ಆಚಾರ್



**ಕೊಪ್ಪಳ :** ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ನೀಡಿ ಎಂದು ಮಾಜಿ ಸಚಿವ ಹಾಲಪ್ಪ ಆಚಾರ್ ಹೇಳಿದರು.

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಿರೇಸಿಂಧೋಗಿಯಲ್ಲಿ ಲೋಕಸಭಾ ಚುನಾವಣೆ ಪ್ರಯುಕ್ತ ನಡೆದ ಬಹಿರಂಗ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಡಳಿತಕ್ಕೆ ದೇಶವೇ ತಲೆ ಬಾಗಿದೆ. ಭ್ರಷ್ಟಾಚಾರ ರಹಿತ ಆಡಳಿತ ನೀಡಿದ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿ ಮಾಡಲು ಬಿಜೆಪಿ ಚಿಹ್ನೆಗೆ ಮತ ನೀಡಬೇಕು ಎಂದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ. ಶರಣಪ್ಪ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರದಲ್ಲಿ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಕೇಂದ್ರ ಸರಕಾರದ ಯೋಜನೆ ದೊರೆತಿವೆ. ಅವರ ಬದುಕನ್ನು ಹಸನಾಗಿಸುವ ಮತ್ತು ದೇಶದ ಅಭಿವೃದ್ಧಿಯ ಓಟವನ್ನು ಇನ್ನು ಹೆಚ್ಚಿನ ವೇಗ ಪಡೆಯುವಂತೆ ಕಳೆದ ಹತ್ತು ವರ್ಷಗಳಿಂದ ಮೋದಿಜೀಯವರು ಮಾಡುತ್ತಾ ಬಂದಿದ್ದಾರೆ ಎಂದು ಕೇಂದ್ರ ಸರ್ಕಾರದ ಸಾಧನೆಗಳನ್ನು ಪರಿಚಯಿಸಿದರು.

ಈ ಸಂದರ್ಭದಲ್ಲಿ ಜೆ.ಡಿ.ಎಸ್ ಕೋರ್ ಕಮಿಟಿ ಸದಸ್ಯ ಸಿ.ವಿ.ಚಂದ್ರಶೇಖರ, ಜೆ.ಡಿ.ಎಸ್ ಜಿಲ್ಲಾಧ್ಯಕ್ಷ ಸುರೇಶ ಭೂಮರೆಡ್ಡಿ, ಕೊಪ್ಪಳ ವಿಧಾನಸಭಾ ಕ್ಷೇತ್ರದ ಬಿಜೆಪಿ ಸಂಚಾಲಕ ಪ್ರದೀಪ ಹಿಟ್ನಾಳ, ಪ್ರಮುಖರಾದ ಮಹಾಂತೇಶ ಮೈನಳ್ಳಿ, ಈಶಪ್ಪ ಮಾದಿನೂರ, ಗುರುಮೂರ್ತಿ ಸ್ವಾಮಿಗಳು, ಅಶೋಕ, ವೆಂಕಟೇಶ ಹಾಲವರ್ತಿ, ಹನುಮಂತಗೌಡ ಪಾಟೀಲ, ಶರಣಪ್ಪ, ಚಂದ್ರಶೇಖರ ಕವಲೂರು, ನಜೀರ ಸಾಬ್, ಮಹಾಂತೇಶ ಸಂಗತಿ, ಕರಿಯಪ್ಪ ಮೇಟಿ, ಅಜಯ ಅಂಗಡಿ, ನಾಗನಗೌಡ, ಗಣೇಶ ಹೊರ್ತಟ್ನಾಳ, ಮಹಿಳಾ ಮೋರ್ಚಾದ ವಾಣಿ, ಶೋಭಾ ನಗರಿ, ಮಹಾಲಕ್ಷ್ಮಿ ಕಂದಾರಿ ಹಾಗೂ ಉಭಯ ಪಕ್ಷದ ಪ್ರಮುಖರು, ಪದಾಧಿಕಾರಿಗಳು, ಕಾರ್ಯಕರ್ತರು, ಸಾರ್ವಜನಿಕರು ಉಪಸ್ಥಿತರಿದ್ದರು.

> ಸುಭದ್ರ ಆಡಳಿತಕ್ಕೆ ಮೋದಿ ನೇತೃತ್ವದ ಕೇಂದ್ರ ಮತ್ತೊಮ್ಮೆ ಅಧಿಕಾರದ ಗದ್ದುಗೆ ಹಿಡಿಯಬೇಕು. ಆದ್ದರಿಂದ ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯನ್ನು ಗೆಲ್ಲಿಸಿ ಕಳುಹಿಸಬೇಕು. ಪ್ರತಿಯೊಬ್ಬರು ಬಿಜೆಪಿಗೆ ಮತ ನೀಡಿ.
>
> –ಗಾಲಿ ಜನಾರ್ದನ ರೆಡ್ಡಿ, **ಶಾಸಕ.**
>
> ---
>
> ಭಾರತದ ರಕ್ಷಣೆ ವ್ಯವಸ್ಥೆ ಬಲ ಪಡಿಸಿದ್ದು, ವಿಶ್ವದಲ್ಲೇ ಬಲಿಷ್ಠ ಸೇನೆ ನಮ್ಮದಾಗಿದೆ. ಪ್ರತಿ ವರ್ಷ ದೀಪಾವಳಿ ಯನ್ನು ಸೈನಿಕರ ಜತೆ ಆಚರಿಸುವ ಮೂಲಕ ಆತ್ಮಸ್ಥೈರ್ಯ ತುಂಬಿದ್ದಾರೆ. ಅವರು ಮತ್ತೊಮ್ಮೆ ಪ್ರಧಾನಮಂತ್ರಿ ಆಗಬೇಕು. ಆದ್ದರಿಂದ ಮತದಾರರು ಬಿಜೆಪಿಗೆ ಮತ ಹಾಕಿ.
>
> –ಹೇಮಲತಾ ನಾಯಕ, **ವಿಧಾನ ಪರಿಷತ್ ಸದಸ್ಯೆ**

# ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳ ಪರಿಶೀಲನಾ ಸಭೆ ನಿಗದಿ

**ಕೊಪ್ಪಳ :** ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳ ಪರಿಶೀಲನಾ ಸಭೆಯನ್ನು ಏಪ್ರಿಲ್ 26 ಮತ್ತು 30 ಹಾಗೂ ಮೇ 4ಕ್ಕೆ ನಿಗದಿಪಡಿಸಲಾಗಿದೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಚುನಾವಣಾ ಸಮಯದಲ್ಲಿ ಅಭ್ಯರ್ಥಿಗಳ ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳನ್ನು ಚುನಾವಣಾ ವೆಚ್ಚ ವೀಕ್ಷಕರು ಪರಿಶೀಲಿಸುವ ಸಲುವಾಗಿ ಮೂರು ಬಾರಿ ದಿನಾಂಕಗಳನ್ನು ನಿಗದಿಪಡಿಸಿ ಸಭೆಗಳನ್ನು ನಡೆಸಿ ಪರಿಶೀಲನೆ ಮಾಡಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಚುನಾವಣಾ ಅಭ್ಯರ್ಥಿಗಳು/ ಅಭ್ಯರ್ಥಿಗಳ ಏಜೆಂಟರುಗಳು ನಾಮಪತ್ರ ಸಲ್ಲಿಸಿದ ದಿನಾಂಕದಿಂದ ಮಾಡುವ ವೆಚ್ಚಗಳಿಗೆ ಸಂಬಂಧಿಸಿದಂತೆ ಭರಿಸಲಾದ ಚುನಾವಣಾ ವೆಚ್ಚಕ್ಕೆ ಸಂಬಂಧಿಸಿದ ವಿವರಗಳನ್ನು ಪಾರ್ಟ್–ಎ (ಡೇ ಟು ಡೇ ರಿಜಿಸ್ಟರ್), ಪಾರ್ಟ್–ಬಿ (ಕ್ಯಾಶ್ ರಿಜಿಸ್ಟರ್), ಪಾರ್ಟ್–ಸಿ (ಬ್ಯಾಂಕ್ ರಿಜಿಸ್ಟರ್)ನಲ್ಲಿ ನಮೂದಿಸಿ ಸಂಬಂಧಿಸಿದ ವೋಚರ್ ಅಥವಾ ರಶೀದಿಗಳೊಂದಿಗೆ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಹಾಗೂ ಚುನಾವಣೆಗೆಸಂಬಂಧಿಸಿದಅನುಮತಿಪಡೆದಆದೇಶ ಪ್ರತಿಗಳೊಂದಿಗೆ ಏ.26 ಮತ್ತು 30 ಹಾಗೂ ಮೇ 4ರ ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆಡಿಟೋರಿಯಂ ಸಭಾಂಗಣದಲ್ಲಿ ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾರದರ್ಶಕ ಆಡಳಿತಕ್ಕಾಗಿ ಬಿಜೆಪಿಗೆ ಮತ ನೀಡಿ: ಹೇಮಲತಾ ನಾಯಕ

**ಕೊಪ್ಪಳ :** ರಾಜ್ಯದಲ್ಲಿ ಆಡಳಿತ ಸುವ್ಯವಸ್ಥೆ ಹದಗೆಟ್ಟಿದೆ. ಶಾಂತಿ, ಸಹಬಾಳ್ವೆ, ಭಾತೃತ್ವ ಭಾವನೆ, ಸುರಕ್ಷಿತ ಅಭಿವೃದ್ಧಿ, ಪಾರದರ್ಶಕ ಆಡಳಿತಕ್ಕಾಗಿ ಬಿಜೆಪಿಗೆ ಮತ ನೀಡಿ ಎಂದು ವಿಧಾನ ಪರಿಷತ್ ಸದಸ್ಯೆ ಹೇಮಲತಾ ಹೇಳಿದರು.

ಕಿನ್ನಾಳ ಗ್ರಾಮದ ಬಾಲಕಿ ಅನುಶ್ರೀ ಮನೆಗೆ ಭೇಟಿ ನೀಡಿ ಮಾತನಾಡಿದ ಅವರು, ಏಳು ವರ್ಷದ ಬಾಲಕಿ ಅನುಶ್ರೀ ಹತ್ಯೆ ದುಃಖ ತಂದಿದೆ. ಈ ಹೇಯ ಕೃತ್ಯ ಮಾಡಿದ ಪಾಪಿಗಳಿಗೆ ಶಿಕ್ಷೆಯಾಗಬೇಕು. ಅನುಶ್ರೀಗೆ ನ್ಯಾಯ ಸಿಗಬೇಕು ಎಂದು ಒತ್ತಾಯಿಸಿದರು.



ರಾಜ್ಯದಲ್ಲಿ ಕೋಮುಗಲಭೆ, ಅಶಾಂತಿ ವಾತಾವರಣ ನಿರ್ಮಾಣವಾಗಿದೆ. ಕಾಂಗ್ರೆಸ್ ತುಷ್ಟೀಕರಣ ರಾಜಕಾರಣ ಮಾಡುತ್ತಿದ್ದು, ಇದರಿಂದ ರಾಜ್ಯದಲ್ಲಿ ಸಾವು– ನೋವುಗಳ ಸಂಖ್ಯೆ ಹೆಚ್ಚಾಗಿದೆ. ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ರಾಜ್ಯಾದ್ಯಂತ ಲಕ್ಷಕ್ಕೂ ಅಧಿಕ ಪ್ರಕರಣ ದಾಖಲಾಗಿದೆ ಎಂದು ಆರೋಪಿಸಿದರು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಸದಾನಂದಗೌಡ, ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದ ಅವಧಿಯಲ್ಲಿನ ಕಾನೂನು ಸುವ್ಯವಸ್ಥೆ ಮಾದರಿಯಾಗಿತ್ತು. ಸಾವು– ನೋವುಗಳ ಸಂಖ್ಯೆ ಕಡಿಮೆ ಇದ್ದವು. ಸಮಾಜದಲ್ಲಿ ಶಾಂತಿ ನೆಲೆಸಿತ್ತು. ಆದರೀಗ ಇದರ ತದ್ವಿರುದ್ಧವಾಗಿದೆ ಎಂದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ.ಶರಣಪ್ಪ ಮಾತನಾಡಿ, ಆರೋಗ್ಯಕರ ಸಮಾಜಕ್ಕಾಗಿ ಶಾಂತಿ ನೆಲಸಬೇಕು. ದೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಅಧಿಕಾರಕ್ಕೆ ಬಂದ ಬಳಿಕ ದೇಶಾದ್ಯಂತ ನಕ್ಸಲರನ್ನು ಮಟ್ಟ ಹಾಕಲಾಗಿದೆ. ರೌಡಿಗಳ ಉಪಟಳ ತಡೆದು ಗಡಿಪಾರು ಮಾಡಲಾಗಿದೆ. ಶಾಂತಿ ಸುವ್ಯವಸ್ಥೆಗಾಗಿ ಮತ್ತೊಮ್ಮೆ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಅಧಿಕಾರಕ್ಕೆ ಬರಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿಯ ಹಿರಿಯ ಮುಖಂಡರಾದ ಕೆ.ಜಿ.ಕುಲಕರ್ಣಿ ಸೇರಿ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

> **ನಿಷ್ಪಕ್ಷಪಾತ ತನಿಖೆಗಾಗಿ ಸಿಬಿಐಗೆ ವಹಿಸಿ**
>
> **ಹುಬ್ಬಳ್ಳಿಯ ನೇಹಾ ಹಿರೇಮಠ ಹತ್ಯೆ, ಭಾಗ್ಯನಗರದ ಪರಶುರಾಮ್ ಸೇರಿ ಮೂವರ ಹತ್ಯೆ, ಬಾಲಕಿ ಅನುಶ್ರೀ ಹತ್ಯೆ ನಡೆದಿದೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಎಡವಿದೆ. ಸಮಾಜದಲ್ಲಿ ಅಶಾಂತಿ ವಾತಾವರಣ ನಿರ್ಮಾಣವಾಗಿದೆ. ಈ ಹತ್ಯೆಗಳಿಗೆ ನ್ಯಾಯ ಒದಗಿಸಬೇಕು. ಆದ್ದರಿಂದ ನಿಷ್ಪಕ್ಷಪಾತ ತನಿಖೆಯಾಗಬೇಕು. ಆದ್ದರಿಂದ ಈ ಪ್ರಕರಣಗಳನ್ನು ಸಿಬಿಐಗೆ ವಹಿಸಬೇಕು ಎಂದು ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ. ಶರಣಪ್ಪ ಒತ್ತಾಯಿಸಿದರು.**

# ಕೊಲೆ ಆರೋಪಿ ಬಂಧಿಸಿದ ತಂಡಕ್ಕೆ ಪ್ರಶಸ್ತಿ



**ಹುಬ್ಬಳ್ಳಿ :** ಏ.18 ರಂದು ಹುಬ್ಬಳ್ಳಿಯ ಬಿವಿಬಿ ಕಾಲೇಜಿನಲ್ಲಿ ನೇಹಾ ಹಿರೇಮಠ ಎಂಬ ವಿದ್ಯಾರ್ಥಿನಿಯನ್ನು ಚಾಕುವಿನಿಂದ ಇರಿದು ಬರ್ಬರವಾಗಿ ಕೊಲೆ ಮಾಡಿದ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾದ ತಂಡದ ಕಾರ್ಯವೈಖರಿಯನ್ನು ಪ್ರಶಂಸಿಸಿದ ಪೊಲೀಸ್ ಆಯುಕ್ತರು ಉತ್ತರ ಉಪವಿಭಾಗದ ಎಸಿಪಿ ಮತ್ತು ವಿದ್ಯಾನಗರ

ಪಿಎಸ್‌ನ ಪಿಐ ರವರ ನೇತೃತ್ವದ ತಂಡಕ್ಕೆ ಕಾಪ್ ಆಫ್ ದಿ ಮಂತ್ ಎಂದು ಘೋಷಿಸಿ, ರೂ. 25 ಸಾವಿರ ನಗದು ಬಹುಮಾನ ಮತ್ತು ಪ್ರಶಂಸನಾ ಪತ್ರ ವಿತರಿಸಿದ್ದಾರೆ.

ಹುಬ್ಬಳ್ಳಿ ಧಾರವಾಡ ನಗರ ಪೊಲೀಸ್ ಆಯುಕ್ತರು ಮತ್ತು ಹಿರಿಯ ಅಧಿಕಾರಿಗಳು ಈ ಪ್ರಕರಣದ ಆರೋಪಿಯನ್ನು ಪತ್ತೆ ಹಚ್ಚಲು ಹುಬ್ಬಳ್ಳಿ ಉತ್ತರ ಉಪವಿಭಾಗದ ಎಸಿಪಿ ಶಿವಪ್ರಕಾಶ ನಾಯ್ಕ ಮತ್ತು ವಿದ್ಯಾನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ಡಿ.ಕೆ ಪಾಟೀಲ್ ಅವರ ನೇತೃತ್ವದಲ್ಲಿ ವಿಶೇಷ ತಂಡವನ್ನು ರಚಿಸಲಾಗಿತ್ತು.

ಕಾರ್ಯ ಪ್ರವೃತ್ತವಾದ ತಂಡದ ಅಧಿಕಾರಿ ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯ ಸಾಧಿಸಿ ಬರ್ಬರವಾಗಿ ಕೊಲೆ ಮಾಡಿ ಪರಾರಿಯಾಗಿದ್ದ ಫಯಾಜ್ ಬಾಬಾಸಾಹೇಬ ಖೊಂದುನಾಯಕ (23) ಈತನ ಸುಳಿವನ್ನು ಬೆನ್ನತ್ತಿ ಕೃತ್ಯ ನಡೆದ ಕೇವಲ ಒಂದು ಗಂಟೆಯೊಳಗೆ ಆರೋಪಿಯನ್ನು ಹಿಡಿದು ಬಂಧಿಸುವಲ್ಲಿ ಯಶಸ್ವಿಯಾಗಿತ್ತು. ನಂತರ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೂ ಒಪ್ಪಿಸಲಾಗಿತ್ತು.

# ನಮ್ಮ ಮಾತಿನಿಂದ ಇನ್ನೊಬ್ಬರಿಗೆ ಕೇಡಾಗಬಾರದು: ಪ್ರೊ. ರಾಮದುರ್ಗ

**ರಬಕವಿ :** ನಮ್ಮ ಮಾತಿನಿಂದ ಇನ್ನೊಬ್ಬರಿಗೆ ಕೇಡಾಗಬಾರದು. ಮನಸ್ಸಿಗೂ ನೋವಾಗಬಾರದು. ನಮ್ಮ ಮಾತು ಇನ್ನೊಬ್ಬರಿಗೆ ಹಿತವೆನಿಸಬೇಕು. ಪ್ರೀತಿ ತುಂಬಿರಬೇಕು ಎಂದು ರಬಕವಿಯ ಸಾಹಿತಿ ಪ್ರೊ. ಮೃತ್ಯುಂಜಯ ರಾಮದುರ್ಗ ಹೇಳಿದರು.



ಇಲ್ಲಿನ ಕುಂಬಾರ ಓಣಿಯಲ್ಲಿರುವ ಜೀವನಮುಕ್ತ ಪರಪ್ಪ ಮನ್ನಿ ನಿವಾಸದಲ್ಲಿ 87 ನೇ ಹನುಮ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಅವರು, ಸನ್ಮಾನಕ್ಕಿಂತ ಸಂಸ್ಕಾರ ದೊಡ್ಡದು. ಇನ್ನೊಬ್ಬರಿಗೆ ಕೇಡಾಗದ ರೀತಿ ನಾವು ಇರಬೇಕು ಎಂದರು.

ಕಾರ್ಯಕ್ರಮದ ಸಾನಿಧ್ಯವನ್ನು ಬ್ರಹ್ಮಾನಂದ ಆಶ್ರಮದ ಅರ್ಚಕ ಮಲ್ಲಯ್ಯ ಗಂಗಯ್ಯ ಮಠಪತಿ ವಹಿಸಿ, ವಚನಕಾರರ ಶ್ರೇಷ್ಠ ಜೀವನ ಅರಿಯಬೇಕು ಎಂದರು. ರಬಕವಿ–ಬನಹಟ್ಟಿ ತಾಲ್ಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮ. ಕೃ. ಮೇಗಾಡಿ, ಯುವ ಸಂಘಟಕ ಮೇಲು ಅಮ್ಮಲಜೇರಿ, ಇಂದೂಧರ ಬೆಳಗಲಿ ಅವರು ಅತಿಥಿಗಳಾಗಿ ಆಗಮಿಸಿದ್ದರು. ಮನುಷ್ಯನಲ್ಲಿ ದಯೆ, ಕರುಣೆ, ಅಂತಃಕರಣ, ಸದ್ಭಾವ ಗುಣಗಳು ಸತ್ಸಂಗದಿಂದ ಬೆಳೆಯುತ್ತವೆ. ರೀತಿ, ನೀತಿ ನಿಯತ್ತು ಸಕಾರಾತ್ಮಕ ವಿಚಾರಗಳು ಬದುಕನ್ನು ಸುಂದರಗೊಳಿಸುತ್ತವೆ ಎಂದರು.

ಹಿರಿಯರಾದ ಬುದ್ದಪ್ಪ ಕುಂದಗೋಳ, ಈರಪ್ಪ ಮನ್ನಿ ವೇದಿಕೆಯಲ್ಲಿದ್ದರು. ಕಲಾವಿದ ಶಂಕರ ಜಂಬಗಿ ಪ್ರಾರ್ಥಿಸಿದರು. ಶಿವಾನಂದ ಗುಂಡಕಲ್ಲಮಠ ಸ್ವಾಗತಿಸಿದರು. ಪ್ರಭು ಮನವಾಡೆ ನಿರೂಪಿಸಿದರು. ಪ್ರಕಾಶ ಮನ್ನಿ ವಂದಿಸಿದರು.

ರಬಕವಿಯ ಶ್ರೀ ಪ್ರಭುಲಿಂಗ ಭಜನಾಮಂಡಳಿ,ಶ್ರೀಮಹಾಲಕ್ಷ್ಮಿ ಭಜನಾಮಂಡಳಿ,ಹೊಸೂರಿನಶ್ರೀ ಶಂಕರಾನಂದ ಭಜನಾ ಮಂಡಳಿ ಕಲಾವಿದರು ಭಕ್ತಿ ಸಂಗೀತ ಸೇವೆಗೈದರು.

# ಸಂಭ್ರಮದ ಹನುಮ ಜಯಂತಿ

**ತೇರದಾಳ :** ವಾಯುಪುತ್ರ ಹನುಮ ಜಯಂತಿಯನ್ನು ತೇರದಾಳ ಸೇರಿದಂತೆ ಸುತ್ತಮುತ್ತಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಶ್ರದ್ಧೆ ಭಕ್ತಿಯಿಂದ ಆಚರಿಸಲಾಯಿತು.



ಜಯಂತಿ ನಿಮಿತ್ತ ಆಂಜನೇಯ ದೇವಸ್ಥಾನಗಳಲ್ಲಿ ನಸುಕಿನ ಜಾವ ಅಭಿಷೇಕ, ಅಲಂಕಾರಿತ ಪೂಜೆ, ಸೂರ್ಯೋದಯ ಮೊದಲು ತೊಟ್ಟಿಲು ಕಾರ್ಯಕ್ರಮಗಳು ನಡೆದವು. ನಂತರ ಬಹುತೇಕ ಆಂಜನೇಯ ದೇವಸ್ಥಾನಗಳಲ್ಲಿ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಬಿಸಿಲಿನ ನಡುವೆಯೂ ಪೇಟೆಭಾಗ, ಸಿದ್ದೇಶ್ವರ ಗಲ್ಲಿ, ಗುಮ್ಮಟ ಗಲ್ಲಿ, ಗುರುಕುಲ ರಸ್ತೆ, ಕಲ್ಲಟ್ಟಿ ಗಲ್ಲಿ, ಪೊಲೀಸ್ ಠಾಣೆ, ರಬಕವಿ ರಸ್ತೆ ಕಲೂತಿ ನಗರ, ದೇವರಾಜ ನಗರ, ತೋಟದ ರಸ್ತೆಗಳು, ಗೋಲಭಾವಿ, ಸಸಾಲಟ್ಟಿ, ಕಾಲತಿಪ್ಪಿ, ಹನಗಂಡಿ, ಹಳಿಂಗಳಿ ತಮದಡ್ಡಿ ಯರಗಟ್ಟಿ ಸೇರಿದಂತೆ ಹಲವು ಕಡೆಗಳಲ್ಲಿ ಹನುಮ ಜಯಂತಿಯನ್ನು ಭಕ್ತರು ಸಂಭ್ರಮ ಸಡಗರದಿಂದ ಆಚರಿಸಿದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State